ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ರಾಮನಗರ,ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಂದ ನಿರಂತರ ಪ್ರಸಾರ



ಕಚೇರಿ ವಿಳಾಸ

ಸ್ಫೂರ್ತಿ ನಿಲಯ,
10ನೇ ಕ್ರಾಸ್,
ಅನ್ನಪೂರ್ಣೇಶ್ವರಿ ನಗರ,
ಮಂಡ್ಯ ಸಿಟಿ–571 401

ಸಂಪಾದಕರು: ಶ್ರೀಮತಿ ಎಂ.ಅಂಬಿಕಾ

ಮಾನವ ಸ್ವಾತಂತ್ರ್ಯದ ಸಮಾನತೆಗಾಗಿ...

ಪ್ರಧಾನ ಸಂಪಾದಕರು:
ಕೆ.ಎಂ.ಮೂರ್ತಿ ಕಬ್ಬನಹಳ್ಳಿ

# ಪ್ರಜಾ ಪ್ರಜ್ಞೆ

PRAJA PRAJNE *Kannada Morning Daily Regional Newspaper*

ಕನ್ನಡ ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

**Editor : Smt. M.Ambika**

Posted at HPO Mandya: KA/SK/MND/1007/2024-2026



ಸುದ್ದಿ ಹಾಗೂ
ಜಾಹೀರಾತಿಗಾಗಿ
ಸಂಪರ್ಕಿಸಿ
8971226099
9980031155
email -
prajaprajne@gmail.com

RNI No: KARKAN/2020/79569 Volume-05 Issue-139 September 27- 2024 Friday Page-6 Rs-1.00

# ಸಿಎಂ ಸಿದ್ದರಾಮಯ್ಯ ವಿರುದ್ಧ ನ್ಯಾಯಾಲಯ ಆದೇಶ: ಮೇಲ್ಮನವಿ ಸಲ್ಲಿಸಲು ಕಾನೂನು ತಜ್ಞರೊಂದಿಗೆ ಸಮಾಲೋಚನೆ

ಬೆಂಗಳೂರು: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಒಗಆಂ) ನಿವೇಶನ ಹಂಚಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ರಾಜ್ಯಪಾಲರ ಅನುಮತಿಯನ್ನು ಎತ್ತಿಹಿಡಿದಿರುವ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ಮೇಲ್ಮನವಿ ಸಲ್ಲಿಸುವ ಕುರಿತು ಹಿರಿಯ ವಕೀಲರು ಮತ್ತು ತಜ್ಞರೊಂದಿಗೆ ಸಮಾಲೋಚನೆ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಪ್ರಮುಖ ಕಾನೂನು ಸಲಹೆಗಾರರು ತಿಳಿಸಿದ್ದಾರೆ.ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ಪೊಲೀಸರ ತನಿಖೆಗೆ ವಿಶೇಷ ನ್ಯಾಯಾಲಯ ಮೊನ್ನೆ ಬುಧವಾರ ಆದೇಶಿಸಿದ್ದು, ಅವರ ವಿರುದ್ಧ ಎಫ್‌ಐಆರ್ ದಾಖಲಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಮುಡಾದಿಂದ ಸಿಎಂ ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರ ಹೆಸರಿಗೆ 14 ನಿವೇಶನಗಳ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಮೇಲೆ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ನೀಡಿದ್ದ ಅನುಮತಿಯನ್ನು ಹೈಕೋರ್ಟ್ ಏಕಸದಸ್ಯ ಪೀಠ ಎತ್ತಿ ಹಿಡಿದ ಮರುದಿನವೇ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಆದೇಶ ಹೊರಬಿದ್ದಿದೆ.

ನಾವು ಮೊದಲಿನಿಂದಲೂ ಹೇಳುತ್ತಾ ಬಂದಿದ್ದೇವೆ, ಯಾವುದೇ ತನಿಖೆಯಾಗಲಿ, ಅದಕ್ಕೆ ನಮ್ಮ ಅಭ್ಯಂತರವಿಲ್ಲ. ಆದರೆ, ಕಾನೂನುಬದ್ಧವಾಗಿ ನಡೆದಿರುವ ಕೆಲವು ಲೋಪದೋಷಗಳನ್ನು ಸರಿಪಡಿಸಬೇಕು, ಇದು ನಮ್ಮ ಕರ್ತವ್ಯ ಎಂದು ಕಾಂಗ್ರೆಸ್ ಶಾಸಕ, ಹಿರಿಯ ವಕೀಲರು ಮತ್ತು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎಎಸ್ ಪೊನ್ನಣ್ಣ ಇಂದು ಸುದ್ದಿಗಾರರಿಗೆ ತಿಳಿಸಿದರು.

ವಕೀಲರು ಮತ್ತು ಹಿರಿಯ ವಕೀಲರೊಂದಿಗೆ ಚರ್ಚೆ ನಡೆಯುತ್ತಿದೆ. ಪ್ರಕರಣದಲ್ಲಿ ವಾದ ಮಂಡಿಸಿದ ದೆಹಲಿಯಲ್ಲಿರುವ ನಮ್ಮ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಅವರ ಸಲಹೆಯನ್ನು ಪಡೆಯಲು ಪ್ರಯತ್ನಿಸುತ್ತಿದ್ದು, ಒಂದೆರಡು ದಿನಗಳಲ್ಲಿ ನಾವು ನಮ್ಮ ನಿಲುವನ್ನು ಸ್ಪಷ್ಟಪಡಿಸುತ್ತೇವೆ ಎಂದರು.

ಹೈಕೋರ್ಟ್ ತೀರ್ಪನ್ನು ಉಲ್ಲೇಖಿಸಿ ಮಾತನಾಡಿದ ಪೊನ್ನಣ್ಣ, ರಾಜ್ಯಪಾಲರ ಮನವೊಲಿಕೆ ಇಲ್ಲ ಎಂಬುದು ನಮ್ಮ ವಾದವಾಗಿತ್ತು.ಮನಸ್ಸಿನ ಅನ್ವಯ ಎಂಬ ಈ ಕಾನೂನು ತತ್ವ ರಾಜ್ಯಪಾಲರಿಗೆ ಮಾತ್ರ ಸೀಮಿತವಲ್ಲ, ನ್ಯಾಯಾಲಯಕ್ಕೂ ಅನ್ವಯಿಸುತ್ತದೆ ಎಂದರು.ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ದೂರಿನ ಅನ್ವಯ ಸಿದ್ದರಾಮಯ್ಯ ವಿರುದ್ಧ ತನಿಖೆ ನಡೆಸುವಂತೆ ಮೈಸೂರಿನ ಲೋಕಾಯುಕ್ತ



ಪೊಲೀಸರಿಗೆ ನ್ಯಾಯಾಲಯ ಸೂಚಿಸಿದೆ.

ಸಿಎಂ ವಿರುದ್ಧದ ಪ್ರಕರಣ ಸಂಪೂರ್ಣ ರಾಜಕೀಯ ಪ್ರೇರಿತ. ಯಾವುದೇ ತನಿಖೆ ಅಥವಾ ವಿಚಾರಣೆ ನಡೆಯಲಿ, ಸತ್ಯವನ್ನು ಮರೆಮಾಡಲು ಸಾಧ್ಯವಿಲ್ಲ ಎಂದು ಪೊನ್ನಣ್ಣ ಹೇಳಿದ್ದಾರೆ.

# ಹೆಬ್ಬಾಲೆ ವಿಶ್ವಕರ್ಮ ಕುಶಲ ಸಹಕಾರ ಸಂಘದ ಮಹಾಸಭೆ

ಕೂಡಿಗೆ: ಹೆಬ್ಬಾಲೆಯಲ್ಲಿರುವ ಕಾಳಿ ಕಾಂಬ ವಿಶ್ವಕರ್ಮ ಕುಶಲ ಕೈಗಾರಿಕಾ ಸಹಕಾರ ಸಂಘದ ವಾರ್ಷಿಕ ಮಹಾಸಭೆಯು ಹೆಬ್ಬಾಲೆಯ ಸಂಘದ ಕಚೇರಿ ಆವರಣದಲ್ಲಿ ಸಂಘದ ಅಧ್ಯಕ್ಷ ಹೆಚ್. ಬಿ. ಲಿಂಗಮೂರ್ತಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು. ನಂತರ 2023– 24 ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಸಂಘದ ಜಮಾ ಖರ್ಚು ಲಾಭ ನಷ್ಟದ ಕುರಿತು ಸರ್ವ ಸದಸ್ಯರೊಂದಿಗೆ ಚರ್ಚಿಸಲಾಗಿತ್ತು ಮತ್ತು ಹೊಸದಾಗಿ ಯಾವುದಾದರೂ ಒಂದು ಉಪಯೋಗವಾಗುವ ಒಂದು ಕೈಗಾರಿಕೆಯನ್ನು ನಿರ್ಮಿಸುವುದು ಹಾಗೂ ಹೊಸ ಹೊಸ ಯೋಜನೆಗಳನ್ನು ಕೈಗೊಳ್ಳುವ ನಿರ್ಧಾರದ ಬಗ್ಗೆ ಚರ್ಚೆಗಳು ನಡೆದವು.

ಸಂಘದ ನೂತನ ಅಧ್ಯಕ್ಷರಾದ ಹೆಚ್ ಬಿ.ಲಿಂಗಮೂರ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ದೇವನೊಬ್ಬ ನಾಮ ಹಲವು ಎಂಬಂತೆ ನಾವು ಯಾವ ದೇವರನ್ನು ಪೂಜಿಸಿದರೂ ಅದು ಸೃಷ್ಟಿಕರ್ತನಾದ ಭಗವಾನ ವಿಶ್ವಕರ್ಮ ಪರಬ್ರಹ್ಮನಿಗೆ ಸಲ್ಲುತ್ತದೆ ವಿಶ್ವಕರ್ಮನ ಮಹಿಮೆಯನ್ನು ಕೊಂಡಾಡುವ ನಮ್ಮ ಸಮಾಜ ಬಾಂಧವರು ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಮುಂದೆ ಬರಬೇಕು ಎಂದು ಹೇಳಿದರು ಹೆಚ್ಚು ಹೊಸ



ಸದಸ್ಯರನ್ನು ಸೇರಿಸಿಕೊಂಡು ಸಂಘದ ಅಭಿವೃದ್ಧಿಗೆ ಸರ್ವ ಸದಸ್ಯರು ಕೈಜೋಡಿಸಬೇಕೆಂದು ಮನವಿ ಮಾಡಿಕೊಂಡರು.

ಸಂಘದ ಗೌರವ ಕಾರ್ಯದರ್ಶಿ ಬಿ ಬಿ ನಾಗರಾಜ್ ಮಾತನಾಡಿ. ನಮ್ಮ ಸಮಾಜ ಬಾಂಧವರು ನಮ್ಮ ಸನಾತನ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಮಕ್ಕಳಿಗೆ ಸೂಕ್ತ ಸಮಯಕ್ಕೆ ಉಪಯಾನ ಸಂಸ್ಕಾರವನ್ನು ಕೊಡಿಸಿ ಗಾಯತ್ರಿ ದೇವಿ ಆರಾಧನೆ ವೇದ ಉಪನಿಷತ್ತುಗಳ ಅಧ್ಯಯನದ ಮೂಲಕ ನಮ್ಮ ದೈಹಿಕ ಪರಂಪರೆಯನ್ನು ಉಳಿಸಿ ಬೆಳೆಸಬೇಕು ಎಂದರು. ಸಂಘದ ನಿರ್ದೇಶಕ ಎಚ್ ಬಿ ದಿನೇಶ ಆಚಾರಿ ಮಾತನಾಡಿ ವಿಶ್ವಕರ್ಮ ಅಂದರೆ ಎಲ್ಲವನ್ನೂ ಸಾಧಿಸಿದವನು ಎಂದಾಗಿದೆ ಜಗತ್ತಿನ ಸೃಷ್ಟಿಕರ್ತನೆ ವಿಶ್ವಕರ್ಮನಾಗಿದ್ದಾನೆ ಯಾವುದೇ ವಸ್ತು ವ್ಯಕ್ತಿಯಾಗಲಿ ಕಾಲಕ್ರಮೇಣ ಬಳಸದೆ ಇದ್ದರೆ ಅದು ನಶಿಸಿ ಹೋಗುತ್ತದೆ ನಾವು ವಿಶ್ವಕರ್ಮನ ಅಸ್ತಿತ್ವ ಅರ್ಥಮಾಡಿಕೊಳ್ಳದಿದ್ದರೆ ವಿಶ್ವಕರ್ಮ ಎಂಬುದು ಒಂದು ಜಾತಿಯಲ್ಲ ಅದು ಒಂದು ಸೃಷ್ಟಿ ಬೆಳವಣಿಗೆ ಈ ಜಗತ್ತು ಸೃಷ್ಟಿ ಮಾಡಿದ ಸೃಷ್ಟಿಕರ್ತನ ಹೆಸರೇ ವಿಶ್ವಕರ್ಮ ಬ್ರಹ್ಮಾಂಡದ ಸೃಷ್ಟಿಕರ್ತನಾದ ವಿಶ್ವಕರ್ಮನಿಗೆ ನಾವೆಲ್ಲರೂ ನಿತ್ಯವೂ ಹೃದಯಪೂರ್ವಕ ಭಕ್ತಿ ಪೂರ್ವಕ ನಮನ ಸಲ್ಲಿಸುವುದರಿಂದಲೇ ಜಗತ್ತು ಉಳಿದಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು ಇದೇ ಸಂದರ್ಭದಲ್ಲಿ ನೂತನ ಅಧ್ಯಕ್ಷ ಎಚ್ ಬಿ.ಲಿಂಗಮೂರ್ತಿ. ಸಂಘದ ಗೌರವ ಕಾರ್ಯದರ್ಶಿ ಬಿ, ಬಿ ನಾಗರಾಜ್, ಸಹ ಕಾರ್ಯದರ್ಶಿ ಹೆಚ್ ,ಆರ್, ಲೋಕನಾಚಾರಿ ,ನಿರ್ದೇಶಕರಾದ ದೇವದಾಸ್ ,ದಿನೇಶಚಾರಿ ಹೆಚ್ ಬಿ, ಕೃಷ್ಣ ,ವಿ ,ನಂಜುಂಡ ಚಾರಿ ,ಉಷಾ, ಶೋಭ ರಾಣಿ ,ಸಂಘದ ಸದಸ್ಯರುಗಳು ಹಾಜರಿದ್ದರು..

# ಬಿಸಿಲು ಮಳೆ ಚಳಿ ಎನ್ನದೆ ಸ್ವಚ್ಛತೆ ಕಾಪಾಡುವವರೇ ಪೌರ ಕಾರ್ಮಿಕರ: ಭಾಸ್ಕರ್ ನಾಯಕ್ ಹರ್ಷ

ಕೂಡಿಗೆ: ಬಿಸಿಲು ಮಳೆ ಚಳಿ ಎನ್ನದೆ ಇಡೀ ಸಮಾಜ ಎಚ್ಚರಗೊಳಿಸುವ ಮುನ್ನವೇ ತಮ್ಮ ಕೆಲಸ ಕಾರ್ಯದಲ್ಲಿ ನಿರಂತರಾಗುವ ಪೌರಕಾರ್ಮಿಕರ ಸೇವೆ ಎಂದು ಕೂಡುಮಂಗಳೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಭಾಸ್ಕರ್ ನಾಯಕ್ ಪ್ರಶಂಸೆ ವ್ಯಕ್ತಪಡಿಸಿದರು..

ಯಾವುದೇ ಅಧಿಕಾರಿಗಳು ಅಥವಾ ಜನಪ್ರತಿನಿಧಿಗಳು ಮಾಡಲಾಗದ ಕೆಲಸವನ್ನು ನಮ್ಮ ಪೌರ ಕಾರ್ಮಿಕರು ಮಾಡುತ್ತಿದ್ದಾರೆ ಪೌರ ಕಾರ್ಮಿಕರು ಕೋವಿಡ್ ಸಂದರ್ಭದಲ್ಲಿ ಸಾಕ್ಷಾತ್ ದೇವರ ರೀತಿಯಲ್ಲೇ ಕೆಲಸ ಮಾಡಿದರು ಎಂದರು. ಪೌರ ಕಾರ್ಮಿಕರ ಸೇವೆಯನ್ನು ರಾಜ್ಯ ಸರ್ಕಾರ ಗುರುತಿಸಿ ಅವರಿಗೆ ಅಗತ್ಯವಿರುವ ಸೌಲಭ್ಯ ಸವಲತ್ತುಗಳನ್ನು ನೀಡಬೇಕು ನಮ್ಮ ಜಿಲ್ಲೆ ಸೇರಿದಂತೆ ಇಡಿ ರಾಜ್ಯದಲ್ಲಿ ಪೌರ ಕಾರ್ಮಿಕರಿಗೆ ಸಂಬಂಧಿಸಿದ ಹಲವು ಸಮಸ್ಯೆಗಳಿವೆ ಅವುಗಳನ್ನು ಸರಕಾರದ ಗಮನಕ್ಕೆ ತರಬೇಕಾಗಿದೆ ಎಂದರು. ಪೌರ ಕಾರ್ಮಿಕರ ಸೇವೆ ನಾವೆಲ್ಲರೂ ಹೆಮ್ಮೆ ಪಡುವಂತಹದ್ದು ಸಾರ್ವಜನಿಕ



ಜೀವನದಲ್ಲಿ ಪೌರಕಾರ್ಮಿಕರ ಸೇವೆ ಅತ್ಯಂತ ಮಹತ್ಮವಾದದ್ದು ಪೌರಕಾರ್ಮಿಕರು ಒಂದು ದಿನ ರಜೆ ಮಾಡಿದರೆ ಎಷ್ಟು ಕಷ್ಟ ಎಂಬುದು ನಾವೆಲ್ಲರೂ ಚಿಂತಿಸಬೇಕು. ಎಂದರು ಭಗವಂತ ಪೌರ ಕಾರ್ಮಿಕರೆಲ್ಲರಿಗೂ ಉತ್ತಮ ಆರೋಗ್ಯ ಆಯಸ್ಸು ನೀಡಲಿ ಎಂದು ಇದೇ ಸಂದರ್ಭ ಕೂಡುಮಂಗಳೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಡಿ ಭಾಸ್ಕರ್ ನಾಯಕ್ ತಿಳಿಸಿದರು.

ನಂತರ ಕೂಡುಮಂಗಳೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಂತೋಷ್ ಮಾತನಾಡಿ ಸಾರ್ವಜನಿಕರು ತಮ್ಮ ಮನೆಯಲ್ಲಿ ಉತ್ಪತ್ತಿಯಾಗುವ ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು ಇದರಿಂದ ನಮ್ಮ ಗ್ರಾಮ ಸ್ವಚ್ಛತೆಗೆ ಧಕ್ಕೆ ಆಗುತ್ತದೆ ಜೊತೆಗೆ ಪೌರ ಕಾರ್ಮಿಕರಿಗೂ ಅದನ್ನು ತೆಗೆಯಲು ಕಷ್ಟವಾಗುತ್ತದೆ ಈ ನಿಟ್ಟಿನಲ್ಲಿ ನಮ್ಮ ಗ್ರಾಮ ಪಂಚಾಯಿತಿಯ ವಾಹನಕ್ಕೆ ಕಸ ನೀಡಬೇಕು ಎಂದರು. ಆದರೆ ಕೋವಿಡ್ ಸಂದರ್ಭದಲ್ಲಿ ಮನೆಯಿಂದ ಯಾರು ವರಬಂದಂತಹ ಸಮಯದಲ್ಲಿಯೂ ಪೌರಕಾರ್ಮಿಕರು ತಮ್ಮ ಸ್ವಚ್ಛತಾ ಸೇವಾ ಮೂಲಕ ನಮ್ಮ ಗ್ರಾಮಗಳನ್ನು ಪ್ರತಿನಿತ್ಯ ಸ್ವಚ್ಛಗೊಳಿಸಿ ಸಾರ್ವಜನಿಕರ ಆರೋಗ್ಯ ಕಾಪಾಡಿ ಸಮಾಜದ ವೈದ್ಯರ ರೀತಿ ಕೆಲಸ ಮಾಡಿದ್ದಾರೆ ಎಂದು ಕೊಂಡಾಡಿದರು..

# ಶ್ರಮಿಕ ಕೃಷಿಕರಿಗೆ ಕೃಷಿ ಮಹಾವಿದ್ಯಾಲಯದ ವಿಶಿಷ್ಟ ಸೇವೆ



ಮಂಡ್ಯ ತಾಲ್ಲೂಕಿನ ದೊಡ್ಡಗರುಡನಹಳ್ಳಿ ಗ್ರಾಮದಲ್ಲಿ ಕೃಷಿ ಮಹಾವಿದ್ಯಾಲಯ, ಮಂಡ್ಯದ ಅಂತಿಮ ವರ್ಷದ ಬಿಎಸ್ಸ.ಸಿ(ಹಾನರ್)ಕೃಷಿ ವಿದ್ಯಾರ್ಥಿಗಳ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಗ್ರಾಮದ ರೈತರ ಸಹಾಯಕ್ಕಾಗಿ ಕೃಷಿ ಮಾಹಿತಿ ಕೇಂದವನ್ನು ದಿನಾಂಕ 25/09/2024ರಂದು ಉದ್ಘಾಟಿಸಲಾಯಿತು. ಗ್ರಾಮದ ಮುಖಂಡರು ಮತ್ತು ದೊಡಗರುಡನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದ್ಯಸರು ಮತ್ತು ಕಾಲೇಜಿನ ಅಧ್ಯಾಪಕ ವೃಂದದವರು ಕೇಂದ್ರವನ್ನು ಉದ್ಘಾಟಿಸಿದರು.

ಕೃಷಿ ಮಾಹಿತಿ ಕೇಂದ್ರದಲ್ಲಿ ವಿವಿಧ ಬೆಳೆಗಳಿಗೆ ಸಂಬಂಧಪಟ್ಟ ತಾಂತ್ರಿಕತೆಗಳು, ಕೃಷಿಯಲ್ಲಿ ಲಾಭಗಳಿಸಲು ಇರುವ ತಂತಜ್ಞಾನಗಳ ಭೌತಿಕ ಮಾದರಿಗಳು, ರೋಗ ಮತ್ತು ಕೀಟಭಾದಿತ ಗಿಡಗಳಿಗೆ ಸಲಹೆಗಳು ಮತ್ತು ಸೂಚನೆಗಳನ್ನು ನೀಡಲು ಕೇಂದವು ನೆರವಾಗುತ್ತದೆ. ಗ್ರಾಮದ ರೈತರು ಕೇಂದ್ರದ ಉಪಯೋಗವನ್ನು ಪಡೆದು ಕೃಷಿಕಾರ್ಯದಲ್ಲಿ ಹೆಚ್ಚು ಆದಾಯಪಡೆಯಬಹುದೆಂದು ಶಿಬಿರದ ಸಂಯೋಜಕರಾದ ಡಾ. ಎಂ.ಟಿ. ಲಕ್ಷ್ಮೀನಾರಾಯಣ್‌ರವರು ಮಾಹಿತಿ ನೀಡಿದರು. ಕೇಂದವು ರೈತರ ಅನುಕೂಲಕ್ಕಾಗಿ ವಿದ್ಯಾರ್ಥಿಗಳ ನೆರವು ಪಡೆದು ಬೆಳಗ್ಗೆಯಿಂದ ಸಂಜೆಯವರೆಗೆ ತೆರೆಯಲು ಸೂಚಿಸಲಾಗಿರುತ್ತದೆ.

# ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸುವಂತೆ ಆಗ್ರಹ

ಮಂಡ್ಯ:ರಾಜ್ಯ ಸಂಘದ ಕಾರ್ಯಕಾರಿ ಸಮಿತಿ ತೀರ್ಮಾನದಂತೆ ಗ್ರಾಮ ಆಡಳಿತಾಧಿಕಾರಿಗಳ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸುವಂತೆ ಆಗ್ರಹಿಸಿ ಗ್ರಾಮ ಆಡಳಿತಾಧಿಕಾರಿಗಳು ಕೆಲಸ ಬಹಿಷ್ಕರಿಸಿ ಮಂಡ್ಯ ನಗರದ ತಾಲ್ಲೂಕು ಕಚೇರಿ ಎದುರು ಅನಿರ್ದಿಷ್ಟಾವಧಿ ಮುಷ್ಕರ ನೆಡೆಸಿದರು.

ಮುಷ್ಕರಕ್ಕೆ ಜಿಲ್ಲಾ ಕಂದಾಯ ಇಲಾಖೆ ನೌಕರರ ಸಂಘದ ವತಿಯಿಂದ ಬಾಹ್ಯ ಬೆಂಬಲ ಸೂಚಿಸಲಾಯಿತು.

ಜಿಲ್ಲಾ ಕಂದಾಯ ಇಲಾಖೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಿ. ತಮ್ಮಣ್ಣಗೌಡ ಮಾತನಾಡಿ ಕಂದಾಯ ಇಲಾಖೆಯಿಂದ ಬೆಳೆ ಸಮೀಕ್ಷೆ, ಬಗರ್ ಹುಕ್ಕುಂ ಭೂಮಿ ಗುರುತು ಮಾಡುವುದು ಸೇರಿದಂತೆ ಸುಮಾರು 17 ಮೊಬೈಲ್ ಅಫ್‌ಗಳನ್ನು ಸೃಜಿಸಿ, ಕೆಲಸ ಮಾಡು ವಂತೆ ಗ್ರಾಮ ಆಡಳಿತಾಧಿಕಾರಿಗಳಿಗೆ ಒತ್ತಡ ಹಾಕಲಾಗುತ್ತಿದೆ. ಆದರೆ ಈ ಮೊಬೈಲ್ ಅಫ್‌ಗಳ ಅಪರೇಷನ್ ಮಾಡಲು ಅಗತ್ಯವಿರುವ ಅಧುನಿಕ ತಂತ್ರಜ್ಞಾನ ಒಳಗೊಂಡ ಮೊಬೈಲ್ ಆಗಲಿ, ಅದಕ್ಕೆ ಬೇಕಾದ ಇಂಟರನೆಟ್ ಸೌಲಭ್ಯ, ಪ್ರಿಂಟರ್ ಯಾವ ಪರಿಕರಗಳನ್ನು ನೀಡದೆ,ಕೆಲಸ ಮಾಡುವಂತೆ ಒತ್ತಡ ಹೇರಲಾಗುತ್ತಿದೆ ಎಂದು ದೂರಿದರು. ಈ



ತಂತ್ರಾಂಶಗಳ ನಿರ್ವಹಣೆಗೆ ಅವಶ್ಯಕವಾಗಿರುವ ಮೊಬೈಲ್, ಲ್ಯಾಪ್‌ಟಾಪ್, ಅದಕ್ಕೆ ಅವಶ್ಯವಿರುವ ಇಂಟರ್‌ನೆಟ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸದೇ ಕರ್ತವ್ಯ ನಿರ್ವಹಿಸುವಂತೆ ಒತ್ತಡ ಹೇರುತ್ತಿರುವುದರಿಂದ ಗ್ರಾಮ ಆಡಳಿತ ಅಧಿಕಾರಿಗಳು ಮಾನಸಿಕ ಹಿಂಸೆ ಅನುಭವಿಸುತ್ತಿದ್ದಾರೆ ಎಂದರು.

ಕ್ಷೇತ್ರಗಳಲ್ಲಿ ನಿರಂತರವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಾಮ ಆಡಳಿತಾಧಿಕಾರಿಗಳಿಗೆ ಯಾವುದೇ ರೀತಿಯ ಮೂಲಭೂತ ಸೌಲಭ್ಯ ಇಲ್ಲದೆ ಕಾರ್ಯ ನಿರ್ವಹಿಸುತ್ತಿದ್ದಾರೆ, ಕೆಲಸದ ಒತ್ತಡವು ಹೆಚ್ಚಾಗಿದ್ದು ಸರ್ಕಾರದಿಂದ ಯಾವುದೇ ಸೌಲಭ್ಯಗಳು ದೊರೆತಿಲ್ಲ.

ಕೆಲಸದ ಒತ್ತಡದಿಂದ ಕಾರ್ಯ ನಿರ್ವಹಿಸಲು ಆಗದೆ ಅಧಿಕಾರಿಗಳು ಸಾವು ನೋವು ಉಂಟಾಗಿದೆ. ಬೆಳಿಗ್ಗೆ 6 ಗಂಟೆಯಿಂದ ಸಂಜೆ 8 ಗಂಟೆಯವರೆಗೆ ಕೆಲಸ ನಿರ್ವಹಿಸುತ್ತಿದ್ದು, ನಮಗೆ ಸರ್ಕಾರ ಯಾವುದೇ ರೀತಿಯ ಸೌಲಭ್ಯ ನೀಡುತ್ತಿಲ್ಲ ಆದ್ದರಿಂದ ಮುಷ್ಕರ ಕೈಗೊಳ್ಳಲಾಗಿದೆ ಹೇಳಿದರು.

ಕಂದಾಯ ಇಲಾಖೆ ನೌಕರರು ಒಗ್ಗಟ್ಟಾಗಬೇಕು.ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳ ಬಗ್ಗೆ ಸರ್ಕಾರಕ್ಕೆ ಎರಡು ದಿವಸಗಳ ಕಾಲಾವಕಾಶ ಕೊಟ್ಟು ನೋಡೋಣ. ನಂತರ ರಾಜ್ಯ ಸಂಘದ ಸಭೆ ಕರೆದು ಮುಂದಿನ ದಿನಗಳಲ್ಲಿ ತಾಲೂಕು ಕಚೇರಿ ಸ್ತಬ್ದ ಆಗುವ ರೀತಿ ಹೋರಾಟ ಮಾಡಲು ಕರೆ ನೀಡಲಾಗುವುದು ಎಂದು ಎಚ್ಚರಿಸಿದರು.

ಮುಷ್ಕರದಲ್ಲಿ ಮಂಡ್ಯ ತಾಲೂಕು ಕಂದಾಯ ಇಲಾಖೆ ನೌಕರರ ಸಂಘದ ಅಧ್ಯಕ್ಷ ವಿ.ವೆಂಕಟೇಶ್, ಖಜಾಂಚಿ ಎಸ್. ಮಹೇಶ್, ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ಮಂಡ್ಯ ತಾಲೂಕು ಅಧ್ಯಕ್ಷ ಕುಮಾರ್, ಸೇರಿದಂತೆ ಕಂದಾಯ ಇಲಾಖೆ ನೌಕರರು ಭಾಗವಹಿಸಿದ್ದರು.

# ರಾಜೀವ್‌ಗಾಂಧಿ ವಿಶ್ವವಿದ್ಯಾಲಯ ರಾಮನಗರಕ್ಕೆ ಸ್ಥಳಾಂತರ: ಡಿ.ಕೆ.ಶಿವಕುಮಾರ್

ಬೆಂಗಳೂರು: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು (ಆರ್‌ಜಿಯುಎಚ್‌ಎಸ್) ರಾಮನಗರ ಕ್ಯಾಂಪಸ್‌ಗೆ ಸ್ಥಳಾಂತರಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬುಧವಾರ ಘೋಷಿಸಿದರು.

ರಾಮನಗರ ಮತ್ತು ಕನಕಪುರದಲ್ಲಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸುವ ಕುರಿತು ಬುಧವಾರ ಸಭೆ ನಡೆಸಿದ ಬಳಿಕ ಉಪ ಮುಖ್ಯಮಂತ್ರಿಗಳು ಸುದ್ದಿಗಾರರ ಜತೆ ಮಾತನಾಡಿದರು.



ರಾಮನಗರ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಭೂ ಮಂಜೂರಾತಿ ವಿಷಯ ಬಗೆ ಹರಿದಿದ್ದು, ಕಾಮಗಾರಿ ನಡೆಯುತ್ತಿದೆ. ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಅಗತ್ಯವಿರುವ ಎಲ್ಲ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ಹಿಂದಿನ ಸರ್ಕಾರದ ಆದೇಶದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಂಯವನ್ನು ರಾಮನಗರಕ್ಕೆ ಸ್ಥಳಾಂತರಿಸಲು ನಿರ್ಧರಿಸಿದ್ದೇವೆ. ಇದನ್ನು ಹಂತಹಂತವಾಗಿ ಕಾರ್ಯಗತಗೊಳಿಸಲಾಗುವುದು ಎಂದು ಹೇಳಿದರು.

ಕನಕಪುರದಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸಲು ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿತ್ತು. ಗೃಹ ಮಂಡಳಿಯಿಂದ ಜಮೀನು ಪಡೆದು ಕಾಲೇಜು ಕಟ್ಟಡ ನಿರ್ಮಾಣ ಮಾಡಲಾಗುವುದು. ಕನಕಪುರದಲ್ಲಿ ಮೂಲಸೌಕರ್ಯ ಇಲ್ಲ ಎಂದು ಎನ್‌ಎಂಸಿಯಿಂದ ಅರ್ಜಿ ತಿರಸ್ಕರಿಸಲಾಗಿತ್ತು. ಹೀಗಾಗಿ ಮೂಲ ಸೌಕರ್ಯ ಹೆಚ್ಚಿಸಿ ಮತ್ತೆ ಹೊಸದಾಗಿ ಅರ್ಜಿ ಸಲ್ಲಿಸಲು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಹಿಂದೆ ಕನಕಪುರದಲ್ಲಿ ಮೆಡಿಕಲ್ ಕಾಲೇಜು ಆರಂಭಿಸಲು ಟೆಂಡರ್ ಕರೆದು ಭೂಮಿ ಪೂಜೆ ಮಾಡಲಾಗಿತ್ತು. ನಂತರ ಯಡಿಯೂರಪ್ಪನವರ ಸರ್ಕಾರದಲ್ಲಿ ಮಾಜಿ ಸಚಿವ ಸುಧಾಕರ್ ಅವರು ಚಿಕ್ಕಬಳ್ಳಾಪುರಕ್ಕೆ ಆ ಮೆಡಿಕಲ್ ಕಾಲೇಜು ತೆಗೆದುಕೊಂಡು ಹೋದರು. ಆಗ ರೂ.450 ಕೋಟಿ ಇದ್ದ ಮೆಡಿಕಲ್ ಕಾಲೇಜು ನಿರ್ಮಾಣ ವೆಚ್ಚ ರೂ.850 ಕೋಟಿಗೆ ಏರಿಕೆಯಾಗಿದೆ.

ಬಿಜೆಪಿ ದ್ವೇಷದ ರಾಜಕಾರಣ ಮಾಡಿದೆ. ನಾವು ಬಜೆಟ್‌ನಲ್ಲಿ ಇದನ್ನು ಘೋಷಿಸಿದ್ದು, ಇದನ್ನು ಹಂತ ಹಂತವಾಗಿ ಪೂರ್ಣಗೊಳಿಸುತ್ತೇವೆ. ಕಾಲೇಜು ನಿರ್ಮಾಣಕ್ಕೆ ಅನುಮತಿ ನೀಡುವಂತೆ ಮರು ಅರ್ಜಿ ಹಾಕುತ್ತೇವೆ. ರಾಮನಗರದಲ್ಲಿನ ಕಟ್ಟಡ ಕಾಮಗಾರಿಗೆ ರೂ.600 ಕೋಟಿ ಬಿಡುಗಡೆಯಾಗಿದ್ದು, ಕೆಲಸ ಭರದಿಂದ ಸಾಗುತ್ತಿದೆ. ನಾವು ಅಭಿವೃದ್ಧಿ ವಿಚಾರದಲ್ಲಿ ರಾಜಕಾರಣ ಮಾಡುವುದಿಲ್ಲ. ರಾಜೀವ್ ಗಾಂಧಿ ವಿವಿ ಕೇಂದ್ರ ಕಚೇರಿ ರಾಮನಗರದಲ್ಲಿ ನಿರ್ಮಾಣ ಮಾಡಬೇಕು ಎಂದು 2008ರಲ್ಲೇ ಸರ್ಕಾರದ ಆದೇಶ ಹೊರಡಿಸಿ ಬಿಲ್ ಮಂಡಿಸಲಾಗಿದೆ. ಇದನ್ನು ಹಂತ ಹಂತವಾಗಿ ಸ್ಥಳಾಂತರ ಮಾಡಲಾಗುವುದು ಎಂದು ತಿಳಿಸಿದರು.

# ನನ್ನ ಬಳಿ ಕೋಟ್ಯಂತರ ರೂ. ಇದೆ, ನಾನೇಕೆ ಲಂಚ ಕೇಳಲಿ: ಮುನಿರತ್ನ

ಬೆಂಗಳೂರು: ಅತ್ಯಾಚಾರ ಪ್ರಕರಣದಲ್ಲಿ ಸಿಐಡಿಯ ವಿಶೇಷ ತನಿಖಾ ದಳ(ಎಸ್‌ಐಟಿ) ವಶದಲ್ಲಿರುವ ಶಾಸಕ ಮುನಿರತ್ನಗೆ ತನಿಖಾಧಿಕಾರಿಗಳು ತೀವ್ರ ವಿಚಾರಣೆ ನಡೆಸಿದ್ದು, ಆರೋಪಿಯಿಂದ ಮೌಖಿಕ ಹಾಗೂ ಲಿಖಿತ ಹೇಳಿಕೆ ದಾಖಲಿಸಿಕೊಂಡಿದ್ದಾರೆ.

ಈ ಮಧ್ಯೆ ಮುನಿರತ್ನ ಜಾಮೀನು ಅರ್ಜಿ ವಿಚಾರಣೆಯನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅ.1ಕ್ಕೆ ಮುಂದೂಡಿದೆ.



ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಮುನಿರತ್ನ ಅವರನ್ನು ಬಾಡಿ ವಾರಂಟ್ ಮೇರೆಗೆ ಮಂಗಳವಾರ ವಶಕ್ಕೆ ಪಡೆದುಕೊಂಡಿದ್ದ ಎಸ್‌ಐಟಿ ಅಧಿಕಾರಿಗಳು, ಸಿಐಡಿ ಕಚೇರಿಗೆ ಕರೆದೊಯ್ದಿದ್ದರು.

ಬುಧವಾರ ಬೆಳಗ್ಗೆಯಿಂದಲೇ ಮುನಿರತ್ನ ವಿಚಾರಣೆ ಆರಂಭಿಸಲಾಗಿದ್ದು, ಮೊದಲ ದಿನದ ವಿಚಾರಣೆಯಲ್ಲಿ ಕೆಲವು ಪ್ರಶ್ನೆ ಕೇಳಲಾಯಿತು. ಲಂಚ ಬೇಡಿಕೆ, ಜಾತಿ ನಿಂದನೆ ಹಾಗೂ ಪ್ರಮುಖವಾಗಿ ಅತ್ಯಾಚಾರ ಪ್ರಕರಣದ ಕೆಲ ದಾಖಲೆಗಳನ್ನೂ ಆರೋಪಿ ಮುಂದಿಟ್ಟು ವಿಚಾರಿಸಲಾಯಿತು. ಆದರೆ, ಮುನಿರತ್ನ ತನಿಖೆಗೆ ಸಹಕಾರ ನೀಡುತ್ತಿಲ್ಲ.

ನಾನು ಯಾರ ಜಾತಿಯನ್ನು ನಿಂದಿಸಿಲ್ಲ. ಲಂಚ ಬೇಡಿಕೆ ಅಗತ್ಯ ಇಲ್ಲ. ನನ್ನ ಬಳಿಯೇ ಕೋಟ್ಯಂತರ ರೂ. ಹಣವಿದೆ. ಸಿನಿಮಾ ನಿರ್ಮಾಪಕನಾಗಿದ್ದೇನೆ? ಎಂದೆಲ್ಲ ಏರು ಧ್ವನಿಯಲ್ಲೇ ಉತ್ತರಿಸಿದ್ದಾರೆ.

ಇನ್ನು ಅತ್ಯಾಚಾರ ಪ್ರಕರಣ ಕುರಿತು, ಸಂತ್ರಸ್ತೆ ಎಷ್ಟು ದಿನಗಳಿಂದ ಪರಿಚಯವಿದ್ದಾರೆ. ಅಲ್ಲದೆ, ಆಕೆ ನಿಮ್ಮ ಮೇಲೆ ಎಚ್‌ಐವಿ ಸೋಂಕಿತೆ ಮೂಲಕ ಹನಿಟ್ರ್ಯಾಪ್‌ಗೆ ಮುಂದಾಗಿದ್ದಿರಿ ಎಂದೆಲ್ಲ ಆರೋಪಿಸಿದ್ದಾಳೆ ಎಂದೆಲ್ಲ ಪ್ರಶ್ನೆಗಳನ್ನು ಕೇಳಲಾಗಿದೆ. ಅದಕ್ಕೆ ಪ್ರತಿಕ್ರಿಯಿಸಿರುವ ಆರೋಪಿ, ?ಯಾವ ಮಹಿಳೆ ಮೇಲೂ ಅತ್ಯಾಚಾರ ಮಾಡಿಲ್ಲ. ಎಚ್‌ಐವಿ ಸೋಂಕಿತೆ ಯಾರೆಂಬುದೇ ಗೊತ್ತಿಲ್ಲ. ನನ್ನ ವಿರುದ್ಧ ಷಡ್ಯಂತ್ರ ಮಾಡಲಾಗಿದೆ? ಎಂದಷ್ಟೇ ಉತ್ತರಿಸುತ್ತಿದ್ದಾರೆ ಎಂದು ಎಸ್‌ಐಟಿ ಮೂಲಗಳು ತಿಳಿಸಿವೆ. ಜತೆಗೆ ಆರೋಪಿ ಮೊಬೈಲ್ ಜಪ್ತಿ ಮಾಡಲಾಗಿದೆ. ಪರಿಶೀಲಿಸಲು ಸೈಬರ್ ತಜ್ಞರಿಗೆ ರವಾನಿಸಲಾಗಿದೆ. ಅತ್ಯಾಚಾರ ಪ್ರಕರಣದ ಸಂಬಂಧ ನ್ಯಾಯಾಲಯದ ಅನುಮತಿ ಪಡೆದು ಮತ್ತೆ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗುವುದು ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

ಅ.1ರಂದು ಜಾಮೀನು ಭವಿಷ್ಯ ನಿರ್ಧಾರ: ಶಾಸಕ ಮುನಿರತ್ನ ಪರ ವಕೀಲ ಅಶೋಕ್ ಹಾರನಹಳ್ಳಿ ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ 82ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಅ.1ಕ್ಕೆ ವಿಚಾರಣೆ ಮುಂದೂಡಿದೆ.

# ಪ್ರಧಾನಿ ಮೋದಿ ಕುರಿತು ಸಿಎಂ ಸಿದ್ದರಾಮಯ್ಯ ಟ್ವೀಟ್: ಕುಮಾರಸ್ವಾಮಿ ಅಚ್ಚರಿಯ ಪ್ರತಿಕ್ರಿಯೆ

ನವದೆಹಲಿ,: ಭ್ರಷ್ಟಾಚಾರ ವಿಚಾರವಾಗಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಸಿಎಂ ಸಿದ್ದರಾಮಯ್ಯ ಸರಣಿ ಟ್ವೀಟ್ ಮೂಲಕ ವಾಗ್ದಾಳಿ ನಡೆಸಿದ್ದಕ್ಕೆ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್?ಡಿ ಕುಮಾರಸ್ವಾಮಿ ಅಚ್ಚರಿಯ ಹೇಳಿಕೆ ನೀಡಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿದ ಅವರು, ರಾಜಕೀಯ ಚರ್ಚೆಗಳು ನಡೆಯುತ್ತವೆ, ಅದಕ್ಕೆ ಹೆಚ್ಚಿನ ಮಹತ್ವ ನೀಡಬೇಕಿಲ್ಲ ಎಂದರು.




ಈ ಹಿಂದೆ ಕರ್ನಾಟಕ ಬಿಜೆಪಿ ಸರ್ಕಾರದ ವಿರುದ್ಧ 40% ಕಮಿಷನ್ ಆರೋಪ ಮಾಡಿದ್ದರು. ಕಾಂಗ್ರೆಸ್?ನಲ್ಲಿ 40 ಪರ್ಸೆಂಟ್??ಗೂ ಹೆಚ್ಚು ಕಮಿಷನ್? ಕೇಳ್ತಾರಂತೆ ಎಂಬ ಆರೋಪ ನಂತರ ಕೇಳಿಬಂತು. ಹೀಗಂತ ತುಮಕೂರಿನಲ್ಲಿ ಗುತ್ತಿಗೆದಾರರೊಬ್ಬರು ಹೇಳಿದ್ದಾರೆ ಎಂದು ಸಿದ್ದರಾಮಯ್ಯಗೆ ಹೆಚ್?ಡಿಕೆ ತಿರುಗೇಟು ನೀಡಿದರು.

ಗಂಗೇನಹಳ್ಳಿ ಡಿನೊಟಿಫಿಕೇಷನ್ ವಿಚಾರವಾಗಿ ನನಗೆ ಯಾವುದೇ ನೊಟೀಸ್ ಕೊಟ್ಟಿಲ್ಲ. ನನ್ನನ್ನು ಯಾರೂ ಸಂಪರ್ಕಿಸಿಲ್ಲ. ನಾನು ಕದ್ದು ಹೋಗಲ್ಲ, ಈ ಕ್ಷಣದವರೆಗೆ ನನ್ನ ಜೊತೆ ಯಾರೂ ಮಾತನಾಡಿಲ್ಲ. ಈ ಸರಕಾರದಲ್ಲಿ ಸುಳ್ಳು ಹೇಳಿಕೆ, ಸುಳ್ಳು ಪ್ರಚಾರ ನಡೆಯುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ಮುಡಾ ಹಗರಣ ಸಂಬಂಧ ಹರಿಯಾಣದ ಚುನಾವಣಾ ಪ್ರಚಾರ ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಧಾನಿ ಮೋದಿ ವಾಗ್ದಾಳಿ ನಡೆಸಿದ್ದರು. ಅದಕ್ಕೆ ತಿರುಗೇಟು ನೀಡಿದ್ದ ಸಿದ್ದರಾಮಯ್ಯ, ಮೋದಿಯವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡಲು ನೈತಿಕತೆ ಇಲ್ಲ ಎಂದಿದ್ದರು. ಅಲ್ಲದೆ, ಸರಣಿ ಟ್ವೀಟ್ ಮೂಲಕ ವಾಗ್ದಾಳಿ ನಡೆಸಿದ್ದರು.

ಹರಿಯಾಣದ ಗೋಹನಾದಲ್ಲಿ ಚುನಾವಣಾ ಪ್ರಚಾರ ರ?ಯಾಲಿಯಲ್ಲಿ ಮಾತನಾಡಿದ್ದ ಮೋದಿ, ದೇಶದಲ್ಲಿ ಭ್ರಷ್ಟಾಚಾರವನ್ನು ಹುಟ್ಟು ಹಾಕಿದ್ದು ಮತ್ತು ಪೋಷಿಸಿದ್ದೇ ಕಾಂಗ್ರೆಸ್. ಇದಕ್ಕೆ ಅನೇಕ ಉದಾಹರಣೆಗಳಿವೆ.. ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ಕೇವಲ ಎರಡು ವರ್ಷಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭೂಹಗರಣದಲ್ಲಿ ಸಿಲುಕಿದ್ದಾರೆ ಎಂದಿದ್ದರು.

ಇದಕ್ಕೆ ತಿರುಗೇಟು ನೀಡಿದ್ದ ಸಿದ್ದರಾಮಯ್ಯ, ಪ್ರಧಾನಿ ಕಾರ್ಯಾಲಯದಲ್ಲಿ ಭ್ರಷ್ಟರನ್ನು ತೊಳೆದು ಶುದ್ಧ ಮಾಡುವ ವಾಷಿಂಗ್ ಮಷಿನ್ ಇದೆ. ಈ ಹಿಂದೆ ಮೋದಿಯೇ ಟೀಕಿಸಿದ್ದ ಪ್ರತಿಪಕ್ಷಗಳ ಅನೇಕ ನಾಯಕರು ಆ ವಾಷಿಂಗ್ ಮಷಿನ್??ನಲ್ಲಿ ಶುದ್ಧವಾಗಿ ಬಿಜೆಪಿ ಸೇರಿದ್ದಾರೆ ಎಂದಿದ್ದರು. ಅದಕ್ಕೆ ಕುಮಾರಸ್ವಾಮಿಯವರನ್ನೂ ಉದಾಹರಣೆ ನೀಡಿದ್ದರು.

# ಕೆಪಿಎಸ್‌ಸಿ ನೇಮಕಾತಿಯಲ್ಲಿ ಬದಲಾವಣೆ, ಸಿಎಂಗೆ ಪತ್ರ



ಬೆಂಗಳೂರು, : ಕರ್ನಾಟಕದ ವಿವಿಧ ಇಲಾಖೆಗಳ ನೇಮಕಾತಿಯನ್ನು ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸುತ್ತದೆ. ಆದರೆ ಈ ನೇಮಕಾತಿ ಪ್ರಕ್ರಿಯೆಗಳಲ್ಲಿ ಬದಲಾವಣೆ ಮಾಡಬೇಕು ಎಂಬ ಬೇಡಿಕೆ ಇದೆ. ಈ ಕುರಿತು ಈಗ ಸರ್ಕಾರವು ಗಮನ ಹರಿಸಿದೆ.

**ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಈ ಕುರಿತು ಪತ್ರವನ್ನು ಬರೆಯಲಾಗಿದೆ.**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ ಖಾತೆ ಸಚಿವ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಈ ಕುರಿತು ಮುಖ್ಯಮಂತ್ರಿಗಳಿಗೆ ಪತ್ರವನ್ನು ಬರೆದಿದ್ದಾರೆ. ಪತ್ರದಲ್ಲಿ ಯಾವ ಯಾವ ಬದಲಾವಣೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

ಪತ್ರದಲ್ಲಿ ಸಚಿವರು ಕರ್ನಾಟಕ ಲೋಕ ಸೇವಾ ಆಯೋಗ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹಾಗೂ ಇತರೆ ನೇಮಕಾತಿ ಪ್ರಾಧಿಕಾರಗಳಲ್ಲಿ ಚಾಲ್ತಿಯಲ್ಲಿರುವ ಹಾಗೂ ಮುಂಬರುವ ನೇಮಕಾತಿ ಪ್ರಕ್ರಿಯೆಗಳಲ್ಲಿ ಈ ಸಲಹೆಗಳನ್ನು ಪರಿಗಣಿಸಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕ್ರಮ ವಹಿಸುವಂತೆ ಸಂಬಂಧಪಟ್ಟ, ಎಲ್ಲಾ ಇಲಾಖೆಯ ಮುಖ್ಯಸ್ಥರು ಹಾಗೂ ನೇಮಕಾತಿ ಪ್ರಾಧಿಕಾರಗಳಿಗೆ ನಿರ್ದೇಶನ ನೀಡುವಂತೆ ಕೋರುತ್ತೇನೆ ಎಂದು ಪತ್ರದಲ್ಲಿ ಮನವಿ ಮಾಡಿದ್ದಾರೆ.

* ವಿವಿಧ ನೇಮಕಾತಿ ಪ್ರಾಧಿಕಾರಗಳು ಇಡೀ ನೇಮಕಾತಿ ಪ್ರಕ್ರಿಯೆಯನ್ನು ಒಂದು ವರ್ಷದೊಳಗೆ ಪೂರ್ಣಗೊಳಿಸಬೇಕು.

* ಎಲ್ಲಾ ಗ್ರೂಪ್ 'ಸಿ' ಪರೀಕ್ಷೆಗಳು ಒಂದೇ ಪಠ್ಯಕ್ರಮವನ್ನು ಹೊಂದಿರುವುದರಿಂದ, ಎಲ್ಲಾ ಗ್ರೂಪ್ 'ಸಿ' ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಾಧಿಕಾರಗಳು ಒಂದೇ ಪರೀಕ್ಷೆಯನ್ನು ನಡೆಸುವುದು.

* ಔಒಖ ಆಧಾರಿತ ಲಿಖಿತ ಪರೀಕ್ಷೆಯ ಬದಲಿಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆ (ಅಃಖಿ) ಪರಿಚಯಿಸಬೇಕು. ಒಎಂಆರ್ ವಿಧಾನವು ಟ್ಯಾಂಪರಿಂಗ್ ಮತ್ತು ಪ್ರಶ್ನೆ ಪತ್ರಿಕೆ ಸೋರಿಕೆಯನ್ನು ತಡೆಯಲು ಸಹಾಯಕವಾಗಿದ್ದು, ನೇಮಕಾತಿ ಪ್ರಕ್ರಿಯೆಯನ್ನು ಕೂಡ ವೇಗಗೊಳಿಸುತ್ತದೆ.

* ವಿವಿಧ ನೇಮಕಾತಿ ಪ್ರಾಧಿಕಾರಗಳು ಸಹಾಯವಾಣಿಯನ್ನು ಸಮರ್ಪಕವಾಗಿ ನಿರ್ವಹಿಸುವುದು.

* ಕೇಂದ್ರ ಮತ್ತು ರಾಜ್ಯ ನೇಮಕಾತಿ ಏಜೆನ್ಸಿಗಳು ನಡೆಸುವ ಪರೀಕ್ಷೆಗಳ ನಡುವಿನ ದಿನಾಂಕಗಳ ಕಾಕತಾಳೀಯವಾಗಿ ಒಮ್ಮೆಲೆ ಬರುವ ಕಾರಣದಿಂದ ವಿವಿಧ ಪರೀಕ್ಷೆಯ ದಿನಾಂಕಗಳನ್ನು ಅನೇಕ ಬಾರಿ ಪರಿಷ್ಕರಿಸಲಾಗಿದೆ. ಪರೀಕ್ಷಾ ದಿನಾಂಕಗಳನ್ನು ನಿಗದಿಪಡಿಸುವಲ್ಲಿ ಕೇಂದ್ರ ಮತ್ತು ರಾಜ್ಯ ನೇಮಕಾತಿ ಏಜೆನ್ಸಿಗಳ ನಡುವೆ ಸಂವಹನವನ್ನು ಖಾತ್ರಿಪಡಿಸುವ ಅವಶ್ಯಕತೆ ಇದ್ದು, ಅಭ್ಯರ್ಥಿಗಳು ಅವರು ಅರ್ಹರಾಗಿರುವ ಎಲ್ಲಾ ಪರೀಕ್ಷೆಗಳಲ್ಲಿಯೂ ಬರೆಯುವ ಹಕ್ಕನ್ನು ಎತ್ತಿಹಿಡಿಯಬೇಕು.

* ಒಂದೇ ದಿನ ನಡೆಸುವ 2 ಪರೀಕ್ಷೆಗಳಿಗೆ 2 ವಿವಿಧ ಜಿಲ್ಲೆಗಳಲ್ಲಿ ಪರೀಕ್ಷಾ ಕೇಂದ್ರಗಳನ್ನು ನಿಗದಿಪಡಿಸುವ ಮೂಲಕ ಆಯೋಗವು ಹಲವು ಬಾರಿ ಮುಜುಗರವನ್ನು ಎದುರಿಸುವಂತಾಗಿದ್ದು, ಇದು ಅಭ್ಯರ್ಥಿಗಳಲ್ಲಿ ಗೊಂದಲವನ್ನು ಮೂಡಿಸುತ್ತಿರುತ್ತದೆ.

* ಒಮ್ಮೆ 1:3 ಪಟ್ಟಿಯನ್ನು ಪ್ರಕಟಿಸಿದ ನಂತರ 1:1 ಪಟ್ಟಿಯನ್ನು ಪ್ರಕಟಿಸಲು ದಾಖಲೆಗಳ ಪರಿಶೀಲನೆ ಪೂರ್ಣಗೊಳಿಸಲು ಸುಮಾರು 6 ತಿಂಗಳು ಕಾಲವನ್ನು ತೆಗೆದುಕೊಳ್ಳುತ್ತದೆ. ಸಮಯವನ್ನು ಉಳಿಸಲು ಮತ್ತು ಪ್ರಕ್ರಿಯೆಯನ್ನು ವೇಗಗೊಳಿಸಲು ವಿವಿಧ ನೇಮಕಾತಿ ಪ್ರಾಧಿಕಾರಗಳು ಅಗತ್ಯವಿರುವ ಎಲ್ಲ ದಾಖಲೆಗಳನ್ನು ಸಾಧ್ಯವಿರುವ ಕಡೆ ಕಂದಾಯ ವಿಭಾಗ ಸಂಖ್ಯೆ (ಖಆ ಸಂಖ್ಯೆ) ಬಳಕೆ ಮಾಡಬಹುದು.

* ಇತರ ನೇಮಕಾತಿ ಏಜೆನ್ಸಿಗಳಿಗೆ ಹೋಲಿಸಿದರೆ ಏಇಂ ನಡೆಸುವ ಎಲ್ಲಾ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕಗಳು ದುಬಾರಿಯಾಗಿದೆ. ಇದರಿಂದ ಅಭ್ಯರ್ಥಿಗಳಿಗೆ ಹೆಚ್ಚಿನ ಆರ್ಥಿಕ ಹೊರೆಯಾಗುತ್ತಿದೆ.

* KEA ಕನ್ನಡ ಕಡ್ಡಾಯ ಪರೀಕ್ಷೆ ನಡೆಸುವ ವಿಧಾನವನ್ನು ಮಾರ್ಪಡಿಸಿ ಏಕಖಅ ನಿಗದಿಪಡಿಸಿರುವ ಆದ್ಯತೆಯನ್ನು ಅನುಸರಿಸಬೇಕು. (ಟಿಪ್ಪಣಿ: ಕೆಪಿಎಸ್‌ಸಿ ಮೇಲಿನ ಹೊರೆಯನ್ನು ಕಡಿಮೆ ಮಾಡಲು, ಆಯೋಗವು ಕನ್ನಡ ಕಡ್ಡಾಯ ಪತ್ರಿಕೆಯನ್ನು ಒಮ್ಮೆ ತೇರ್ಗಡೆ ಮಾಡುವ ಪ್ರತಿಯೊಬ್ಬ ಅಭ್ಯರ್ಥಿಗೆ 3 ವರ್ಷಗಳವರೆಗೆ ಪರೀಕ್ಷೆಗಳಿಗೆ ಹಾಜರಾಗುವುದರಿಂದ ವಿನಾಯಿತಿ ನೀಡುತ್ತದೆ ಎಂದು ನಿಯಮ ಮಾಡಿದ)

* ಸರ್ಕಾರದ ಮುಂದಿನ 3 ವರ್ಷಗಳ ನೇಮಕಾತಿ ಯೋಜನೆಯನ್ನು ಮುಂಚಿತವಾಗಿ ವಿವಿಧ ನೇಮಕಾತಿ ಪ್ರಾಧಿಕಾರಗಳಿಗೆ ತಿಳಿಸುವುದು ಇದರಿಂದ ನೇಮಕಾತಿ ಪ್ರಾಧಿಕಾರ ತಮ್ಮ ವಾರ್ಷಿಕ ಕ್ಯಾಲೆಂಡರ್ ಅನ್ನು ತಯಾರಿಸುವುದು.

* ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳಲ್ಲಿ ಕನ್ನಡ ಮಾಧ್ಯಮವಾಗಿಟ್ಟುಕೊಂಡು ಮುಖ್ಯ ಪರೀಕ್ಷೆ ಬರೆಯುವ ಅಭ್ಯರ್ಥಿಗಳ ಸಂಖ್ಯೆಯು ಅಂತಿಮ ಆಯ್ಕೆ ಪಟ್ಟಿಯಲ್ಲಿ ಕಡಿಮೆ ಸಂಖ್ಯೆಯಲ್ಲಿ ಆಯ್ಕೆಯಾಗುತ್ತಿರುವುದನ್ನು ಗಮನಿಸಲಾಗಿದೆ ಇದರಿಂದ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವುದನ್ನು ಸರಿಪಡಿಸುವುದು.

# ಮೋದಿ ಅವರೇ, ನಿಮ್ಮನ್ನು ಕರ್ನಾಟಕಕ್ಕೆ ಕರೆಸಿ ಸನ್ಮಾನ ಮಾಡುತ್ತೇನೆ: ಸಿದ್ದರಾಮಯ್ಯ

ಬೆಂಗಳೂರು, : ನಮ್ಮ ಸರ್ಕಾರದ ವಿರುದ್ಧ ಭ್ರಷ್ಟಾಚಾರದ ಆರೋಪ ಹೊರಿಸಿ ಭಾಷಣ ಮಾಡುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರೇ, ಭ್ರಷ್ಟಾಚಾರದ ಆರೋಪದ ಕಳಂಕ ಮೆತ್ತಿಕೊಂಡಿಲ್ಲದ ಒಬ್ಬನೇ ಒಬ್ಬ ನಾಯಕನನ್ನು ಕರ್ನಾಟಕದ ಬಿಜೆಪಿಯಲ್ಲಿ ನೀವು ತೋರಿಸಿದರೆ ನಿಮ್ಮನ್ನು ಕರ್ನಾಟಕಕ್ಕೆ ಗೌರವದಿಂದ ಕರೆಸಿ ಸಾರ್ವಜನಿಕವಾಗಿ ಸನ್ಮಾನ ಕಾರ್ಯಕ್ರಮ ಏರ್ಪಡಿಸುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ ಅವರು, ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಹುದ್ದೆಯನ್ನು ಎರಡುವರೆ ಸಾವಿರ ಕೋಟಿ ರೂಪಾಯಿಗಳಿಗೆ ಹರಾಜು ಹಾಕಿ ಹಣ ಪೀಕಿದ್ದಾರೆ ಎಂಬ ಆರೋಪವನ್ನು ಸ್ವಪಕ್ಷದ ನಾಯಕರಿಂದಲೇ ಎದುರಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ? ಎಂದು ಪ್ರಶ್ನಿಸಿದ್ದಾರೆ.

ತಮ್ಮ ಪಕ್ಷದ ಮುಖ್ಯಮಂತ್ರಿ ಹುದ್ದೆಯನ್ನು ಮಾರಾಟ ಮಾಡಲಾಗಿದೆ ಎಂದು ರಾಜ್ಯದ ಬಿಜೆಪಿ ಶಾಸಕರೊಬ್ಬರು ಬಹಿರಂಗವಾಗಿ ಆರೋಪಿಸಿದ್ದರೂ ಅವರ ಮೇಲೆ ಕ್ರಮ ಇಲ್ಲ. ದಿನ ಬೆಳಗಾದರೆ ಭ್ರಷ್ಟಾಚಾರದ ಆರೋಪದ ಕೆಸರೆರಚಾಟದಲ್ಲಿ ತೊಡಗಿರುವ ಬಿಜೆಪಿ ಶಾಸಕರ ವಿರುದ್ಧವೂ ಯಾವ ಕ್ರಮವೂ ಇಲ್ಲ. ನರೇಂದ್ರ ಮೋದಿ ಅವರೇ ಈ ಮೌನಕ್ಕೆ, ಈ ನಿಷ್ಕ್ರೀಯತೆಗೆ ಏನು ಕಾರಣ? ಈ ಭ್ರಷ್ಟಾಚಾರದಲ್ಲಿ ನೀವೂ ಭಾಗಿದಾರರೆಂದು ತಿಳಿದುಕೊಳ?ಳಬಹುದೇ? ಎಂದು ಕೇಳಿದ್ದಾರೆ.

ಗಣಿಗಾರಿಕೆಗೆ ಕಾನೂನುಬಾಹಿರವಾಗಿ ಭೂಮಿ ಮಂಜೂರು ಮಾಡಿರುವ, ನೂರಾರು ಕೋಟಿ ರೂಪಾಯಿ ಹಗರಣದ ಆರೋಪ ಎದುರಿಸುತ್ತಿರುವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಕೇಂದ್ರ ಸಂಪುಟಕ್ಕೆ ಸೇರಿಸಿಕೊಂಡಿರುವ ನಿಮಗೆ ಇತರರ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡುವಾಗ ಆತ್ಮಸಾಕ್ಷಿಯೂ ಚುಚ್ಚುವುದಿಲ್ಲವೇ? ಈ ಹಗರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಲು ಕರ್ನಾಟಕದ ಲೋಕಾಯುಕ್ತರು ಕೋರಿರುವ ಅನುಮತಿ ಬಗ್ಗೆ ಘನತೆವೆತ್ತ ರಾಜ್ಯಪಾಲರು ಕಣ್ಣುಮುಚ್ಚಿಕೊಂಡಿರುವುದೇಕೇ? ಅವರ ಮೇಲೆ ಒತ್ತಡ ಹೇರುತ್ತಿರುವರು ಯಾರು? ಎಂದು ಪ್ರಶ್ನಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರೇ, ಕಳೆದ ಹನ್ನೊಂದು ವರ್ಷಗಳಲ್ಲಿ ನಿರಂತರವಾಗಿ ನಿಮ್ಮ ಕಾರ್ಯಾಲಯದ ವಾಷಿಂಗ್ ಮೆಷಿನ್ ಕೆಲಸ ಮಾಡುತ್ತಿರುವುದನ್ನು ದೇಶ ಗಮನಿಸುತ್ತಿದೆ. ನಿಮ್ಮಿಂದಲೇ ಭ್ರಷ್ಟಾಚಾರದ ಆರೋಪಕ್ಕೊಳಗಾಗಿರುವ ವಿರೋಧ ಪಕ್ಷಗಳ ನಾಯಕರನ್ನೆಲ್ಲಾ ವಾಷಿಂಗ್ ಮೆಷಿನ್ ನಲ್ಲಿ ಹಾಕಿ ಪರಮ ಪ್ರಾಮಾಣಿಕರನ್ನಾಗಿ ಮಾಡುತ್ತಿರುವ ನಿಮ್ಮ ಚಾಕಚಕ್ಯತೆಗೆ ಶಹಭಾಸ್ ಅನ್ನಲೇ ಬೇಕು. ಅಧಿಕೃತ ಮಾಹಿತಿಯ ಪ್ರಕಾರವೇ 2014ರಿಂದ ಇಲ್ಲಿಯ ವರೆಗೆ ಭ್ರಷ್ಟಾಚಾರದ ಆರೋಪ ಹೊತ್ತಿರುವ 25 ವಿರೋಧ ಪಕ್ಷದ ನಾಯಕರು ಬಿಜೆಪಿ ಸೇರಿದ್ದಾರೆ. ಇವರಲ್ಲಿ 23 ನಾಯಕರನ್ನು ಭ್ರಷ್ಟಾಚಾರದ ಆರೋಪಗಳಿಂದ ಕೇಂದ್ರ ತನಿಖಾ ಸಂಸ್ಥೆಗಳು ಮುಕ್ತಗೊಳಿಸಿವೆ.

ಹಿಮಂತಾ ಶರ್ಮಾ, ಸುವೇಂದು ಅಧಿಕಾರಿ, ಹೆಚ್.ಡಿ.ಕುಮಾರಸ್ವಾಮಿ, ಅಜಿತ್ ಪವಾರ್, ಅಶೋಕ್ ಚವ್ಹಾಣ್, ನಾರಾಯಣ ರಾಣೆ, ಪ್ರತಾಪ್ ಸರ್‌ನಾಯಕ್ ಅವರಿಂದ ಹಿಡಿದು ಇತ್ತೀಚಿನ ಏಡ್ಸ್ ಟ್ರ್ಯಾಪ್ ಗಿರಾಕಿ ಮುನಿರತ್ನ ವರೆಗೆ ಎಷ್ಟೊಂದು ಭ್ರಷ್ಟರನ್ನು ವಾಷಿಂಗ್ ಮೆಷಿನ್ ನಲ್ಲಿ ತೊಳೆದು ನೀವು ಕ್ಲೀನ್ ಮಾಡಿಲ್ಲ? ಇವೆಲ್ಲ ಕೇವಲ ಧರ್ಮಾರ್ಥ ಸೇವೆಯೇ ಪ್ರಧಾನಿಗಳೇ?

ಪ್ರಧಾನಿ ನರೇಂದ್ರ ಮೋದಿ ಅವರೇ, ನಿಮ್ಮ ಪಕ್ಷದ ಖಜಾನೆಗೆ ಸಂದಾಯವಾಗಿರುವ ಚುನಾವಣಾ ಬಾಂಡ್ ಗಳ ಹಿಂದಿನ ಕೊಡುಗೈ ದಾನಿಗಳು ಯಾರು? ಅವರು ಕೊಟ್ಟದ್ದೆಷ್ಟು? ಅದಕ್ಕಾಗಿ ಅವರು ಪಡೆದದ್ದು ಎಷ್ಟು? ಎನ್ನುವುದು ಇಂದು ದೇಶದ ಜನರ ಕಣ್ಣಮುಂದಿದೆ. ನಿಮ್ಮ ಹನ್ನೊಂದು ವರ್ಷಗಳ ಅವಧಿಯಲ್ಲಿ ಬ್ಯಾಂಕ್ ಲೂಟಿಗೈದವರು ದೇಶ ಬಿಟ್ಟು ಓಡಿಹೋಗಲು ದಾರಿ ಮಾಡಿಕೊಟ್ಟವರು ಯಾರು?




ಅದಾನಿ–ಅಂಬಾನಿ ಅವರ ಸಂಪತ್ತು ಎಷ್ಟು ಪಟ್ಟು ಹೆಚ್ಚಾಯಿತು? ಬಡವರ ಗಳಿಕೆ ಎಷ್ಟು ಪಟ್ಟು ಕಡಿಮೆಯಾಯಿತು?ಎಂದು ಪ್ರಶ್ನಿಸಿದ್ದಾರೆ.

ನೀವು ಭ್ರಷ್ಟಾಚಾರದ ಬಗ್ಗೆ ಚರ್ಚೆ ಪ್ರಾರಂಭಿಸಿರುವುದನ್ನು ನೋಡಿ ಸಂತೋಷವಾಯಿತು. ನನ್ನ ವಿರುದ್ಧ ಭ?ರಷ್ಟಾಚಾರದ ಸುಳ್ಳು ಆರೋಪಗಳನ್ನು ಮಾಡಿ ಕುಣಿದಾಡುತ್ತಿರುವ ಪಾತ್ರಧಾರಿಗಳನ್ನಷ್ಟೇ ರಾಜ್ಯದ ಜನ ನೋಡಿದ್ದಾರೆ. ಈಗ ಇದರ ಹಿಂದಿರುವ ಸೂತ್ರಧಾರಿ ಯಾರು ಎನ್ನುವುದು ಕೂಡಾ ಜನರಿಗೆ ಗೊತ್ತಾಗಲಿ. ಮೋದಿಯವರೇ, ದೂರದ ಊರಲ್ಲಿ ಕೂತು ಗಾಳಿಯಲ್ಲಿ ಗುಂಡು ಹೊಡೆಯಬೇಡಿ, ನೇರಾನೇರ ಚರ್ಚೆ ಮಾಡಲು ನೀವು ಸಿದ್ಧ ಇದ್ದರೆ ನಾನು ಸದಾ ಸಿದ್ಧ ಎಂದು ಸವಾಲು ಹಾಕಿದ್ದಾರೆ.

# ಎಚ್ಎಂಟಿಗೆ ಭೂಮಿ ಮಂಜೂರು: ಹಿರಿಯ ಅಧಿಕಾರಿಗಳಿಗೂ ಸರ್ಕಾರ ನೋಟಿಸ್



ಬೆಂಗಳೂರು: ಎಚ್ಎಂಟಿಗೆ ಅರಣ್ಯ ಭೂಮಿ ಅಕ್ರಮ ಪರಭಾರೆ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ 7 ದಿನಗಳೊಳಗೆ ವಿವರ ನೀಡುವಂತೆ ಎಪಿಸಿಸಿಎಫ್ ವೆಂಕಟಸುಬ್ಬಯ್ಯ ಮತ್ತು ಇತರ ವಿಭಾಗೀಯ ಅರಣ್ಯ ಅಧಿಕಾರಿಗಳಿಗೆ ಶೋಕಾಸ್ ನೋಟಿಸ್ ಜಾರಿಗೊಳಿಸಲಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ಅವರು ಬುಧವಾರ ಹೇಳಿದರು.

ಈ ಕುರಿತು ಅರಣ್ಯಾಧಿಕಾರಿಗಳಿಗೆ ಹಾಗೂ ಮುಖ್ಯ ಕಾರ್ಯದರ್ಶಿಗಳಿಗೂ ಪತ್ರ ಬರೆದಿರುವ ಸಚಿವರು, ಕರ್ನಾಟಕ ಅರಣ್ಯ ಕೈಪಿಡಿಯಲ್ಲಿ ಕರ್ನಾಟಕ ಅರಣ್ಯ ಕಾಯ್ದೆ 1963ರ ಸೆಕ್ಷನ್ 17ರಡಿಯಲ್ಲಿ ಮೀಸಲು ಅರಣ್ಯ ಎಂದು ಅಧಿಸೂಚನೆಯಾದ ಬಳಿಕ, ಆ ಅರಣ್ಯವನ್ನು 'ಯಾವತ್ತೂ ಅರಣ್ಯವಲ್ಲ' ಎಂದು ಘೋಷಿಸಬೇಕಾದರೆ ವಿಧಾನಮಂಡಲದ ಉಭಯ ಸದನಗಳಲ್ಲಿ ನಿರ್ಣಯ ಆಗಬೇಕು ಎಂದು ಸ್ಪಷ್ಟವಾಗಿದೆ.

ಅಲ್ಲದೆ, ಕರ್ನಾಟಕ ಸರ್ಕಾರದ ಕಾರ್ಯ ಕಲಾಪಗಳ ನಿರ್ವಹಣಾ ನಿಯಮಾವಳಿ 1977ರಲ್ಲಿ ಕೂಡಾ ಯಾವುದೇ ಇತರ ಸರ್ಕಾರಿ ಇಲಾಖೆಗೆ ಸರ್ಕಾರಿ ಭೂಮಿ ವರ್ಗಾವಣೆ ಮಾಡಬೇಕಾದ ಸಂದರ್ಭದಲ್ಲಿ ಅದರ ಮೌಲ್ಯ ರೂ.5 ಕೋಟಿಗಿಂತ ಹೆಚ್ಚಾಗಿದ್ದಲ್ಲಿ, ಸಚಿವ ಸಂಪುಟದ ಪೂರ್ವಾನುಮತಿ ಪಡೆಯಬೇಕು ಎಂದು ತಿಳಿಸಲಾಗಿದೆ. ಆದರೆ, ಕೆಲವು ಅಧಿಕಾರಿಗಳು ಸಚಿವರ ಗಮನಕ್ಕೂ ತಾರದೆ, ಸಚಿವ ಸಂಪುಟದ ಅನುಮತಿಯೂ ಇಲ್ಲದೆ ತಮ್ಮ ಮಟ್ಟದಲ್ಲೇ ಸರ್ಕಾರದ ಆದೇಶ ಮಾಡಿ ಸುಪ್ರೀಂಕೋರ್ಟ್ಗೆ ಮಧ್ಯಂತರ ಅರ್ಜಿ ಸಲ್ಲಿಸಿರುವುದು ಅನುಮಾನ ಹುಟ್ಟಿಸುತ್ತಿದೆ.

ಎಚ್ಎಂಟಿ ಸಂಸ್ಥೆಯು ಈ ಅರಣ್ಯ ಭೂಮಿಯನ್ನು ಸರ್ಕಾರಿ ಮತ್ತು ಖಾಸಗಿಯವರಿಗೆ ಪರಭಾರೆ ಮಾಡಲು ನಿರಾಕ್ಷೇಪಣಾ ಪತ್ರವನ್ನೂ ಇಲಾಖೆ ನೀಡಿದೆ. ಇದರಿಂದಾಗಿ ಎಚ್ಎಂಟಿ ಸಂಸ್ಥೆ ಈವರೆಗೆ 165 ಎಕರೆ ಜಮೀನನ್ನು, ರೂ.313.65 ಕೋಟಿಗೆ ಖಾಸಗಿ ಮತ್ತು ಸರ್ಕಾರಿ ಸಂಸ್ಥೆಗಳಿಗೆ ಮಾರಾಟ ಮಾಡಿದೆ.

2015ರಲ್ಲಿ ಅಂದಿನ ಎಪಿಸಿಸಿಎಫ್ ವೆಂಕಟಸುಬ್ಬಯ್ಯ ಅವರು ಎಚ್ಎಂಟಿ ಪ್ರದೇಶದ ಅರಣ್ಯ ಭೂಮಿ ತೆರವಿಗೆ 64 ಎ ಪ್ರಕ್ರಿಯೆ ನಡೆಸಿ ಆದೇಶ ನೀಡಿರುತ್ತಾರೆ. ಈ ಆದೇಶದ ವಿರುದ್ಧ ಎಚ್ಎಂಟಿ. ನಿಗದಿತ ಕಾಲಮಿತಿಯಲ್ಲಿ ಮೇಲ್ಮನವಿಯನ್ನೂ ಸಲ್ಲಿಸಿಲ್ಲ. ಹೀಗಾಗಿ ಇದು ಅರಣ್ಯ ಇಲಾಖೆಯ ಸ್ವತ್ತಾಗಿರುತ್ತದೆ. ವಸ್ತುಸ್ಥಿತಿ ಹೀಗಿರುವಾಗ, ಕೆಲವು ಹಿರಿಯ ಅರಣ್ಯಾಧಿಕಾರಿಗಳು, ಅಂದಿನ ಅರಣ್ಯ ಸಚಿವರಿಂದ ಲಿಖಿತ ಅನುಮತಿ ಪಡೆಯದೆ, ಸಚಿವ ಸಂಪುಟದ ಅನುಮೋದನೆ ಪಡೆಯದೆ ಎಚ್ಎಂಟಿ ಪ್ರದೇಶದ ಅರಣ್ಯ ಭೂಮಿಯನ್ನು ಡಿನೋಟಿಫೈ ಮಾಡಲು ತರಾತುರಿಯಲ್ಲಿ ಸರ್ಕಾರಿ ಆದೇಶ ಮಾಡಿಸಿ, ಸುಪ್ರೀಂಕೋರ್ಟ್ಗೆ ಮಧ್ಯಂತರ ಅರ್ಜಿ ಸಲ್ಲಿಸಿರುವುದೂ ಅನುಮಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದ್ದಾರೆ.

ಸದ್ಯ ಎಲ್ಲ ಅಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡುವಂತೆ ಖಂಡ್ರೆ ಸೂಚನೆ ನೀಡಿದ್ದಾರೆ. ಅಲ್ಲದೆ, 7 ದಿನಗಳ ಒಳಗಾಗಿ ಉತ್ತರ ಪಡೆದು, ಮುಂದಿನ ಕ್ರಮ ಜರುಗಿಸಲು ಸೂಚಿಸಿದ್ದಾರೆ.

# ತುಂಗಭದ್ರಾ ಜಲಾಶಯದ ಕ್ರೆಸ್ಟ್ ಗೇಟ್ ಬದಲಾವಣೆ: ಸರ್ಕಾರಕ್ಕೆ 3 ಪ್ರಮುಖ ಸ್ಟೀಲ್ ಫ್ಯಾಕ್ಟರಿಗಳು ಸಾಥ್..!



ಹೊಸಪೇಟೆ: ತುಂಗಭದ್ರಾ ಜಲಾಶಯದ ಎಲ್ಲಾ 33 ಕ್ರೆಸ್ಟ್ ಗೇಟ್‌ಗಳನ್ನು ಬದಲಾಯಿಸಲು ಮುಂದಾಗಿರುವ ಸರ್ಕಾರಕ್ಕೆ ರಾಜ್ಯದ ಮೂರು ಪ್ರಮುಖ ಉಕ್ಕಿನ ಕಾರ್ಖಾನೆಗಳು ಸಾಥ್ ನೀಡಲು ಮುಂದೆ ಬಂದಿವೆ.

ಅವಿಭಜಿತ ಬಳ್ಳಾರಿ ಜಿಲ್ಲೆಯಲ್ಲಿರುವ ಜೆಎಸ್‌ಡಬ್ಲ್ಯು ಉಕ್ಕಿನ ಕಾರ್ಖಾನೆ, ನಾರಾಯಣ ಮತ್ತು ಹಿಂದೂಸ್ತಾನ್ ಇಂಜಿನಿಯರಿಂಗ್ ವರ್ಕ್ಸ್ ಕಾರ್ಖಾನೆಗಳು ಕ್ರೆಸ್ಟ್ ಗೇಟ್ ಬದಲಾವಣೆ ಯೋಜನೆಗೆ ಕಬ್ಬಿಣ ಒದಗಿಸಲಿವೆ ಎಂದು ಮೂಲಗಳು ತಿಳಿಸಿವೆ.

ಆಗಸ್ಟ್ 10 ರಂದು ಅಣೆಕಟ್ಟಿನ ಕ್ರೆಸ್ಟ್ ಗೇಟ್ ಒಡೆದು ನೀರಿನಲ್ಲಿ ಕೊಚ್ಚಿಹೋದ ಘಟನೆಯ ನಂತರ ತಜ್ಞರ ತಂಡ ತಾತ್ಕಾಲಿಕ ಸ್ಟಾಪ್ಲಾಗ್ ಗೇಟ್ ಅಳವಡಿಸಿತ್ತು. ನಂತರ ಒಂದು ವಾರದಲ್ಲಿ ಕ್ರೆಸ್ಟ್ ಗೇಟ್ ನ್ನು ಮರುಸ್ಥಾಪನೆ ಮಾಡಲಾಯಿತು. ಇದೀಗ ಸರ್ಕಾರ ಎಲ್ಲಾ 33 ಕ್ರೆಸ್ಟ್ ಗೇಟ್ ಗಳನ್ನು ಬದಲಾಯಿಸಲು ಮುಂದಾಗಿದ್ದು, ಈ ಯೋಜನೆಗೆ ಮೂರು ಕಾರ್ಖಾನೆಗಳು ಸಹಾಯ ಹಸ್ತ ಚಾಚಿವೆ.

ಕೆಲ ದಿನಗಳ ಹಿಂದಷ್ಟೇ ಜಲಾಶಯಕ್ಕೆ ಬಾಗಿನ ಅರ್ಪಿಸುವ ವೇಳೆ ಮಾತಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕ್ರೆಸ್ಟ್ ಗೇಟ್ ಅಳವಡಿಕೆ ಕಾಮಗಾರಿಯನ್ನು ಶೀಘ್ರ ಆರಂಭಿಸಲಾಗುವುದು ಎಂದು ರೈತರಿಗೆ ಭರವಸೆ ನೀಡಿದ್ದರು.

ಈ ವರ್ಷಾಂತ್ಯದೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದು ಡಿಸಿಎಂ ಹಾಗೂ ಜಲಸಂಪನ್ಮೂಲ ಸಚಿವ ಡಿ ಕೆ ಶಿವಕುಮಾರ್ ಅವರೂ ಘೋಷಿಸಿದ್ದರು.

ಟಿಬಿ ಅಣೆಕಟ್ಟು ಮಂಡಳಿಯ ಹಿರಿಯ ಅಧಿಕಾರಿ ಮಾತನಾಡಿ, ತುಂಗಭದ್ರಾ ಅಣೆಕಟ್ಟಿನ ಪ್ರಸ್ತುತ ಸ್ಥಿತಿಯ ಬಗ್ಗೆ ಅಧ್ಯಯನ ನಡೆಸಲು ಸಮಿತಿಯನ್ನು ರಚಿಸಲಾಗಿತ್ತು. ಸಮಿತಿಯು ವರದಿಯನ್ನು ಸಲ್ಲಿಸಿದ್ದು, ವರದಿಯ ಪ್ರಕಾರ, ಅಣೆಕಟ್ಟಿಗೆ ಹೊಸ ಕ್ರೆಸ್ಟ್ ಗೇಟ್‌ಗಳನ್ನು ಅಳವಡಿಸುವ ಅಗತ್ಯವಿದೆ ಎಂದು ತಿಳಿಸಿದೆ ಎಂದು ಹೇಳಿದ್ದಾರೆ.

ಟಿಬಿ ಅಣೆಕಟ್ಟಿನ ಕ್ರೆಸ್ಟ್ ಗೇಟ್ ಸಂಖ್ಯೆ 19 ಒಡೆದ ನಂತರ ಮೂರು ಕಂಪನಿಗಳಾದ ಜೆಎಸ್‌ಡಬ್ಲ್ಯೂ ಸ್ಟೀಲ್ ಪ್ಲಾಂಟ್, ನಾರಾಯಣ ಮತ್ತು ಹಿಂದೂಸ್ತಾನ್ ಎಂಜಿನಿಯರಿಂಗ್ ವರ್ಕ್ಸ್ ಉತ್ತಮ ರೀತಿಯಲ್ಲಿ ಕೆಲಸ ಮಾಡಿದ್ದವು. ಈ ಕಂಪನಿಗಳ 24ಥ7 ಕೆಲಸ ತಾತ್ಕಾಲಿಕ ಸ್ಟಾಪ್‌ಲಾಗ್ ಗೇಟ್ ಸ್ಥಾಪಿಸಲು ಸಹಾಯ ಮಾಡಿತು. ಕೆಲಸವು ಒಂದು ವಾರದಲ್ಲಿ ಪೂರ್ಣಗೊಂಡಿತ್ತು. ಇದೀಗ ಉಳಿದ ಕ್ರೆಸ್ಟ್ ಗೇಟ್ ಬದಲಾವಣೆಗೆ ಸಹಾಯ ಹಸ್ತ ಚಾಚಿವೆ. ಹೊಸ ಕ್ರೆಸ್ಟ್ ಗೇಟ್ ಗಳನ್ನು ಇತ್ತೀಚಿನ ತಂತ್ರಜ್ಞಾನದ ಪ್ರಕಾರ ನಿರ್ಮಿಸಲಾಗುವುದು ಎಂದು ತಿಳಿಸಿದರು.

# ಯುವ ದಸರಾ 2024: ಮೈಸೂರಿನಲ್ಲಿ ಹರಿಯಲಿದೆ ಸಂಗೀತ ಸುಧೆ, ಇಳಯರಾಜ–ರೆಹಮಾನ್ ಪ್ರಮುಖ ಆಕರ್ಷಣೆ



ಮೈಸೂರು: ಈ ವರ್ಷ ಮರೆಯಲಾಗದ ಯುವ ದಸರಾಕ್ಕೆ ಮೈಸೂರು ಸಜ್ಜಾಗಿದ್ದು, ಸಂಗೀತ ರಸಸಂಜೆಯಲ್ಲಿ ಸಂಗೀತ ಕ್ಷೇತ್ರದ ದಿಗ್ಗಜ ಕಲಾವಿದರಾದ ಇಳಿಯರಾಜ, ಎ.ಆರ್.ರೆಹಮಾನ್ ಮತ್ತು ಶ್ರೇಯಾ ಘೋಷಾಲ್ ಸೇರಿದಂತೆ ಹಲವರು ಸಂಗೀತ ಸುಧೆ ಹರಿಸಲಿದ್ದಾರೆ.

ಯುವ ದಸರಾ ಸಮಿತಿಯಿಂದ ಅ.6ರಿಂದ 10ರವರೆಗೆ ಯುವ ದಸರಾ ಕಾರ್ಯಕ್ರಮ ಆಯೋಜಿಸಲಾಗಿದೆ. ಅ.6ರಂದು ಅಶ್ವಿನಿ ಪುನೀತ್ ರಾಜ್ ಕುಮರ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ನಾಲ್ಕು ದಿನಗಳ ಕಾಲ ಸಂಜೆ 6ರಿಂದ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ.

ಅಕ್ಟೋಬರ್ 6ರಂದು ಬಾಲಿವುಡ್ ಹಿನ್ನೆಲೆ ಗಾಯಕಿ ಶ್ರೇಯಾ ಘೋಷಾಲ್, ಅ.7ರಂದು ಸಂಗೀತ ಸಂಯೋಜಕ ರವಿ ಬಸ್ರೂರು, ಅ.8ರಂದು ಖ್ಯಾತ ರಾಪರ್ ಬಾದ್ ಷಾ, ಅ.9ರಂದು ಸಂಗೀತ ನಿರ್ದೇಶಕ ಎ.ಆರ್.ರೆಹಮಾನ್ ಮತ್ತು ಅ.10 ರಂದು ಸಂಗೀತ ಸಂಯೋಜಕ, ನಿರ್ದೇಶಕ ಇಳಯರಾಜ ಮತ್ತು ಅವರ ತಂಡ ಪ್ರೇಕ್ಷಕರಿಗೆ ಸಂಗೀತ ರಸಸಂಜೆ ಉಣಬಡಿಸಲಿದ್ದಾರೆ.

ಯುವ ದಸರಾ ಕಾರ್ಯಕ್ರಮಗಳ ವೀಕ್ಷಣೆಗೆ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಸುಮಾರು ಒಂದು ಲಕ್ಷ ಜನ ವೀಕ್ಷಿಸಬಹುದಾಗಿದೆ. ಅಲ್ಲದೇ, ವೀಕ್ಷಣೆಗೆ ಟಿಕೆಟ್ ಆಧರಿತ ಪ್ರತ್ಯೇಕ ಆಸನ ವ್ಯವಸ್ಥೆಯನ್ನೂ ಮಾಡಲಾಗುತ್ತಿದ್ದು, ಆಸನ ಕಾಯ್ದಿರಿಸಲು ಆನ್‌ಲೈನ್ ಮೂಲಕ ಟಿಕೆಟ್ ಮಾರಾಟ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಅಧಿಕೃತ ಜಾಲತಾಣ www.mysoredasara.gov.in ಹಾಗೂ ಬುಕ್ ಮೈ ಶೋ ಮೂಲಕ ಸೆ.27ರಿಂದ ಟಿಕೆಟ್ ಖರೀದಿಸಬಹುದು.

ಕಾರ್ಯಕ್ರಮ ವೀಕ್ಷಕರಿಗೆ ಕಾಯ್ದಿರಿಸಲಾಗುವ ವೀಕ್ಷಕರ ಗ್ಯಾಲರಿ–1ರ ವೇದಿಕೆ ಸಮೀಪದ ಟಿಕೆಟ್ ಬೆಲೆ ರೂ.8,000 ಹಾಗೂ ವೀಕ್ಷಕರ ಗ್ಯಾಲರಿ–2 ಕ್ಕೆ ರೂ.5,000 ನಿಗದಿಪಡಿಸಲಾಗಿದೆ. ಒಂದು ಟಿಕೆಟ್‌ನಲ್ಲಿ ಒಬ್ಬರಿಗೆ ಮಾತ್ರ ಪ್ರವೇಶಾವಕಾಶ ನೀಡಲಾಗುತ್ತಿದೆ.

ಪ್ರತೀ ವರ್ಷ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಯುವ ದಸರಾ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿತ್ತು. ಆದರೆ, ಈ ಬಾರಿ ಕಾರ್ಯಕ್ರಮವನ್ನು ಇನ್ನಷ್ಟು ಅದ್ಧೂರಿಯಾಗಿ ಆಚರಿಸುವ ದೃಷ್ಟಿಯಿಂದ ಲಲಿತಾದ್ರಿಪುರ ಮತ್ತು ಉತ್ತನಹಳ್ಳಿ ನಡುವಿನ ಖಾಲಿ ಜಮೀನಿನಲ್ಲಿ ಆಯೋಜಿಸಲಾಗುತ್ತಿದೆ.

ಸುಮಾರು 100 ಎಕರೆಯಷ್ಟು ಕೃಷಿ ಭೂಮಿಯನ್ನು ಕಾರ್ಯಕ್ರಮಕ್ಕೆ ಬಳಸಿಕೊಳ್ಳಲಾಗುತ್ತಿದ್ದು, 1 ಲಕ್ಷ ಮಂದಿಗೆ ಆಸನದ ವ್ಯವಸ್ಥೆ ಮಾಡಲಾಗುತ್ತಿದೆ.

ಈ ನಡುವೆ ಯುವ ದಸರಾ ಕಾರ್ಯಕ್ರಮದ ಸ್ಥಳವನ್ನು ಬದಲಾಯಿಸಿರುವ ಸಂಬಂಧ ಪರ ಹಾಗೂ ವಿರೋಧ ಚರ್ಚೆಗಳು ಆರಂಭವಾಗಿವೆ.

ನಗರದ ಹೊರವಲಯದ ಒಂದು ಮೂಲೆಯಲ್ಲಿ ಕಾರ್ಯಕ್ರಮ ನಡೆದರೆ ಓಡಾಟಕ್ಕೆ ತೊಂದರೆ ಆಗಲಿದೆ ಎಂದು ಕೆಲವರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ನಗರದ ಹೃದಯ ಭಾಗದಲ್ಲಿ ಕಾರ್ಯಕ್ರಮ ನಡೆದರೆ ಅನುಕೂಲ ಹೆಚ್ಚು. ಬರುವವರಿಗೆ ಬೇಕಾದ ಊಟೋಪಚಾರ ಸೇರಿದಂತೆ ಸಕಲೆಂಟು ಸೌಲಭ್ಯಗಳು ಸಿಗುತ್ತವೆ. ಆದರೆ, ಕಾರ್ಯಕ್ರಮ ವೀಕ್ಷಣೆಗೆ ಹೊರವಲಯಕ್ಕೆ ಹೋಗುವುದು ಕಷ್ಟ. ವೀಕ್ಷಕರಿಗೆ ಬೇಕಾದ ಮೂಲ ಸೌಕರ್ಯಗಳೂ ಇರುವುದಿಲ್ಲ. ಅದರಲ್ಲೂ ಮಹಿಳೆಯರ ಓಡಾಟ ಹಾಗೂ ಸುರಕ್ಷತೆ ದೃಷ್ಟಿಯಿಂದ ಮಹಾರಾಜ ಕಾಲೇಜು ಮೈದಾನವೇ ಕಾರ್ಯಕ್ರಮಕ್ಕೆ ಉತ್ತಮ ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

ಇನ್ನೂ ಕೆಲವರು ವಿಶಾಲವಾದ ಪ್ರದೇಶವಾದ ಕಾರಣ ಟ್ರಾಫಿಕ್ ಸಮಸ್ಯೆ ಉದ್ಭವಿಸಲ್ಲ. ಸಾವಿರಾರು ಕಾರು, ಬೈಕ್‌ಗಳ ಪಾರ್ಕಿಂಗ್ ವ್ಯವಸ್ಥೆ ಮಾಡಬಹುದು. ಲಕ್ಷ ಮಂದಿ ಕಾರ್ಯಕ್ರಮ ವೀಕ್ಷಣೆ ಮಾಡಿದರೂ ಜನದಟ್ಟಣೆ ಆಗುವುದಿಲ್ಲ ಎಂದು ಹೇಳುತ್ತಿದ್ದಾರೆ.

# ಸಿದ್ದರಾಮಯ್ಯಗಲ್ಲ ನಿವೇಶನ ಮಂಜೂರು ಮಾಡಿದ BJPಗೆ ಶಿಕ್ಷೆಯಾಗಬೇಕು: ಸಚಿವ ಚಲುವರಾಯಸ್ವಾಮಿ



ಮೈಸೂರು: ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗಲ್ಲ, ನಿವೇಶನ ಮಂಜೂರು ಮಾಡಿದ ಬಿಜೆಪಿಗೆ ಶಿಕ್ಷೆಯಾಗಬೇಕೆಂದು ಸಚಿವ ಚಲುವರಾಯಸ್ವಾಮಿಯವರು ಬುಧವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಗರಣ ಪ್ರಕರಣ ತನಿಖೆ ನಡೆಸುವಂತೆ ನ್ಯಾಯಾಲಯ ಲೋಕಾಯುಕ್ತಕ್ಕೆ ನಿರ್ದೇಶನ ನೀಡಿವುದು ಹೊಸದೇನಲ್ಲ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ಕಾರಣಕ್ಕೂ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದಿಲ್ಲ. ಬದಲಿಗೆ ವಿಪಕ್ಷಗಳ ಆರೋಪಗಳನ್ನು ಎದುರಿಸುತ್ತಾರೆಂದು ಹೇಳಿದರು.

ಹೈಕೋರ್ಟ್ ತೀರ್ಪು ಕುರಿತು ಪಕ್ಷಷ ಹಿರಿಯ ವಕೀಲರ ಜೊತೆಗೆ ಮಾತುಕತೆ ನಡೆಸುತ್ತಿದ್ದಾರೆ. ಸಿದ್ದರಾಮಯ್ಯ ಅವರು 50:50 ಅನುಪಾತದಡಿ ನಿವೇಶನ ಹಂಚಿಕೆಗೆ ಆದೇಶ ನೀಡಿಲ್ಲ, ನಿವೇಶನ ಹಂಚಿಕೆ ಮಾಡಿದ ಅಂದಿನ ಬಿಜೆಪಿ ನಾಯಕರನ್ನು ತರಾಟೆಗೆ ತೆಗೆದುಕೊಳ್ಳಬೇಕಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ರಾಜೀನಾಮೆಗೆ ಬಿಜೆಪಿ ಒತ್ತಡ ಹೇರುತ್ತಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿ, ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ, ಮಾಜಿ ಸಚಿವ ಮುರುಗೇಶ್ ನಿರಾಣಿ ಮತ್ತು ಇತರರು ತಮ್ಮ ವಿರುದ್ಧ ಗಂಭೀರ ಭ್ರಷ್ಟಾಚಾರದ ಆರೋಪಗಳಿದ್ದರೂ ಹೇಗೆ ಅಧಿಕಾರದಲ್ಲಿ ಮುಂದುವರಿಯುತ್ತಿದ್ದಾರೆಂದು ಪ್ರಶ್ನಿಸಿದರು.

ಮುಖ್ಯಮಂತ್ರಿಗೆ ಕಾಂಗ್ರೆಸ್ ಹೈಕಮಾಂಡ್, ಸಚಿವರು ಮತ್ತು ಶಾಸಕರು ಬೆಂಬಲವಿದೆ. ಹೀಗಾಗಿ, ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಪ್ರಶ್ನೆಯೇ ಇಲ್ಲ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಅವರು ಸಿದ್ದರಾಮಯ್ಯ ಅವರ ಮೇಲಿನ ಆರೋಪಗಳು ರಾಜಕೀಯ ಪ್ರೇರಿತ ಎಂದು ಸ್ಪಷ್ಟಪಡಿಸಿದ್ದಾರೆ. 136 ಶಾಸಕರನ್ನು ಹೊಂದಿರುವ ಕಾಂಗ್ರೆಸ್ ಪ್ರತಿಪಕ್ಷಗಳ ಒತ್ತಡ ತಂತ್ರಕ್ಕೆ ಮಣಿಯುವುದಿಲ್ಲ ಎಂದರು.

ಇದೇ ವೇಳೆ ಮಂಡ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವರ್ಚಸ್ಸು ಹಾಳು ಮಾಡಿ ಸರ್ಕಾರ ಅಸ್ಥಿರಗೊಳಿಸುವ ಷಡ್ಯಂತ್ರ ನಡೆಯುತ್ತಿದೆ ಎಂದು ಆರೋಪಿಸಿ ಹಿಂದುಳಿದ ವರ್ಗಗಳ ವೇದಿಕೆಯ ಸದಸ್ಯರು ಮಂಡ್ಯದಲ್ಲಿ ಪ್ರತಿಭಟನೆ ನಡೆಸಿದರು.

ಮುಡಾ ನಿವೇಶನಗಳ ಹಂಚಿಕೆ ನಿಯಮಗಳ ಗಾಳಿಗೆ ತೂರಿರುವ ಬಿಜೆಪಿ ಮತ್ತು ಜೆಡಿಎಸ್ ಮುಖಂಡರ ವಿರುದ್ಧ ಕಾರ್ಯಕರ್ತರು ಕಪ್ಪುಪಟ್ಟಿ ಧರಿಸಿ ಆಕ್ರೋಶ ವ್ಯಕ್ತಪಡಿಸಿದರು.

# ವಾಯುಪ್ರದೇಶ ಮುಕ್ತಗೊಳಿಸಿದ ನಂತರ ಬೆಂಗಳೂರಿನ 2ನೇ ವಿಮಾನ ನಿಲ್ದಾಣದ ಸ್ಥಳ ನಿರ್ಧಾರ!



ಬೆಂಗಳೂರು: ತೀವ್ರ ಚರ್ಚೆಯಾಗುತ್ತಿರುವ ಬೆಂಗಳೂರಿಗೆ ಎರಡನೇ ವಿಮಾನ ನಿಲ್ದಾಣಕ್ಕೆ ಇನ್ನೂ ಜಾಗ ಎಲ್ಲಿಯೂ ಅಂತಿಮಗೊಂಡಿಲ್ಲ. ಇದಕ್ಕೆ ಮುಖ್ಯ ಸಮಸ್ಯೆ ಎಂದರೆ ವಿಮಾನಗಳನ್ನು ನಿರ್ವಹಿಸಲು ಏರ್ ಸ್ಪೇಸ್ ಇಲ್ಲದಿರುವುದು. ಈ ಸಂಬಂಧ ಸರ್ಕಾರ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಕರ್ನಾಟಕ ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಕಾರ್ಯದರ್ಶಿ ಎನ್ ಮಂಜುಳಾ ಬುಧವಾರ ಹೇಳಿದ್ದಾರೆ.

ಬೆಂಗಳೂರಿನ 2ನೇ ವಿಮಾನ ನಿಲ್ದಾಣಕ್ಕಾಗಿ ಹಲವು ಸ್ಥಳಗಳನ್ನು ಗುರುತಿಸಲಾಗಿದೆ, ಆದರೆ ನಾವು ಯಾವುದನ್ನೂ ಅಂತಿಮಗೊಳಿಸಿಲ್ಲ. ನಗರದಲ್ಲಿ ಅಸ್ತಿತ್ವದಲ್ಲಿರುವ ವಿಮಾನ ನಿಲ್ದಾಣಗಳ ವ್ಯಾಪ್ತಿಗೆ ಒಳಪಡುವುದರಿಂದ ವಾಯು ಮಾರ್ಗ ಸಂಚಾರ ದಟ್ಟಣೆ ನಿಜವಾದ ಸಮಸ್ಯೆಯಾಗಿದೆ.

ಈ ಸಂಬಂಧ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್, ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ನಿರ್ವಾಹಕರು, ಹಿಂದೂಸ್ತಾನ್ ಏರೋನಾಟಿಕಲ್ ಲಿಮಿಟೆಡ್ ಮತ್ತು ರಕ್ಷಣಾ ಅಧಿಕಾರಿಗಳೊಂದಿಗೆ ಯಲಹಂಕದ ಏರ್ ಫೋರ್ಸ್ ಸ್ಟೇಷನ್‌ನಲ್ಲಿ ಕಳೆದ ವಾರ ಸರ್ಕಾರ ಮಾತುಕತೆ ನಡೆಸಿದೆ.

ಬೆಂಗಳೂರಿನ ಅಸ್ತಿತ್ವದಲ್ಲಿರುವ ಜಾಗವನ್ನು ಈ ವಿಮಾನ ನಿಲ್ದಾಣಗಳು 360 ಡಿಗ್ರಿಗಳಷ್ಟು ಆವರಿಸಿವೆ. ಅಕ್ಕಪಕ್ಕದ ಪ್ರದೇಶಗಳ ಆಕಾಶ ಮಾರ್ಗವೂ ಸಹ ಟ್ರಾಫಿಕ್‌ನಿಂದ ಆವೃತವಾಗಿದೆ. ಉಚಿತ ಏರ್‌ಸ್ಪೇಸ್ ಲಭ್ಯವಾದ ನಂತರವೇ ಹೊಸ ವಿಮಾನ ನಿಲ್ದಾಣದ ಸ್ಥಳವನ್ನು ಅಂತಿಮಗೊಳಿಸಬಹುದು ಎಂದು ಮಂಜುಳಾ ಅವರು ಹೇಳಿದರು.

ಈ ಭಾಗದಲ್ಲಿ ಸಂಶೋಧನೆ ಮತ್ತು ಇತರ ವಿಮಾನ ಪರೀಕ್ಷೆ ಉದ್ದೇಶಗಳಿಗಾಗಿ ಕೊಯಮತ್ತೂರಿನವರೆಗೆ ವಾಯು ಜಾಗವನ್ನು ಬಳಸುತ್ತಾರೆ ಎಂದು ಊಂಐ ಹೇಳಿದೆ. BIAL ದೇವನಹಳ್ಳಿಯ ಆಚೆಗೆ 30 ಕಿಲೋಮೀಟರ್‌ಗಳಷ್ಟು ವಾಯುಪ್ರದೇಶವನ್ನು ಬಳಸುತ್ತದೆ, ಆದರೆ ಭಾರತೀಯ ವಾಯುಪಡೆಯು ಹಾಸನದವರೆಗೆ ವಾಯುಪ್ರದೇಶವನ್ನು ಬಳಸುತ್ತಿದೆ.

ಅವರು ನಮಗೆ ಲಭ್ಯವಾಗುವಂತೆ ಮಾಡಬಹುದಾದ ವಾಯು ಜಾಗದ ಬಗ್ಗೆ ನಮಗೆ ಮಾಹಿತಿ ನೀಡಲು ನಾವು ಅವರನ್ನು ಕೇಳಿದ್ದೇವೆ. ಕೆಲವು ರೀತಿಯ ಒಮ್ಮತಕ್ಕೆ ಬರಬೇಕಾಗಿದೆ. ಅವರು 24ಥ7 ವಿಮಾನಗಳನ್ನು ನಿರ್ವಹಿಸುವುದಿಲ್ಲ. ಆದ್ದರಿಂದ, ಉದ್ದೇಶಿತ ವಿಮಾನ ನಿಲ್ದಾಣವು ಕಾರ್ಯನಿರ್ವಹಿಸಲು ಕೆಲವು ಸಮಯವನ್ನು ಲಭ್ಯಗೊಳಿಸಬೇಕಾಗಿದೆ ಎಂದು ಅವರು ಹೇಳಿದರು.

ನಾಗರಿಕ ವಿಮಾನಯಾನ ಸಚಿವಾಲಯ ಅಥವಾ ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯದ ನೆರವಿನಿಂದ ಮಾತ್ರ ಸಮಸ್ಯೆಯನ್ನು ಬಗೆಹರಿಸಬಹುದು. ನಮ್ಮ ಎರಡನೇ ವಿಮಾನ ನಿಲ್ದಾಣವನ್ನು ಅಂತಿಮಗೊಳಿಸಲು ಕೆಲವು ರೀತಿಯ ವಾಯುಪ್ರದೇಶದಲ್ಲಿ ಯಾವುದೇ ರೀತಿಯ ವಿಮಾನ ಹಾರಾಟವಿಲ್ಲದ ವಿಶ್ರಾಂತಿ ಪ್ರದೇಶ ರಚಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳಲು ನಮಗೆ ಅವರ ಬೆಂಬಲ ಬೇಕು ಎಂದು ಮಂಜುಳಾ ಹೇಳಿದರು.

ಕಳೆದ ತಿಂಗಳು ನೆಲಮಂಗಲ ಮತ್ತು ಕುಣಿಗಲ್ ನಡುವೆ, ಕನಕಪುರ ರಸ್ತೆಯ ಹಾರೋಹಳ್ಳಿ, ದಾಬಸ್‌ಪೇಟೆ ಮತ್ತು ಕೊರಟಗೆರೆ, ತುಮಕೂರು, ಹುಲಿಯೂರುದುರ್ಗ ಮತ್ತು ಮಳವಳ್ಳಿ ಸುತ್ತಮುತ್ತಲಿನ ಪ್ರದೇಶಗಳ ಕುರಿತು ಚರ್ಚೆ ನಡೆಸಲಾಗಿತ್ತು ಎಂದು ತಿಳಿದುಬಂದಿದೆ.

# ರೈಲಿಗೂ ತಟ್ಟಿದ 'ಬೆಂಗಳೂರು ಟ್ರಾಫಿಕ್' ಬಿಸಿ: ವಿಡಿಯೋ ವೈರಲ್, ಅಧಿಕಾರಿಗಳ ಸ್ಪಷ್ಟನೆ

ಬೆಂಗಳೂರು: ಬೆಂಗಳೂರು ಟ್ರಾಫಿಕ್‌ನಲ್ಲಿ ಸಿಲುಕಿಕೊಂಡಿರುವ ರೈಲಿನ ವಿಡಿಯೋ ಮತ್ತು ವಾಹನ ದಟ್ಟಣೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದ್ದು, ಈ ಬಗ್ಗೆ ಅಧಿಕಾರಿಗಳು ಸ್ಪಷ್ಟನೆ ನೀಡಿದ್ದಾರೆ.

ಬೆಂಗಳೂರಿನ ಮಾರತಹಳ್ಳಿ ಸಮೀಪದ ಮುನ್ನೆಕೊಲ್ಲಾಲ ರೈಲ್ವೆ ಕ್ರಾಸಿಂಗ್ ಬಳಿ ಟ್ರಾಫಿಕ್ ಜಾಮ್ ಆಗಿದ್ದು, ವಾಹನಗಳು ಸಾಲಾಗಿ ನಿಂತ ಪರಿಣಾಮ ರೈಲು ಕೂಡ ಟ್ರಾಫಿಕ್ ಜಾಮ್ ನಲ್ಲಿಯೇ ಸಿಲುಕಿಕೊಂಡಿದೆ ಎಂಬ ವಿಡಿಯೋವೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಈ ಕುರಿತ ವಿಡಿಯೋವೊಂದನ್ನು ಸುಧೀರ್ ಚಕ್ರವರ್ತಿ ಎಂಬವರು ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಂಡಿದ್ದು, ನಾನು ಅಥವಾ ನೀವು ಮಾತ್ರವಲ್ಲ ರೈಲಿಗೂ ಕೂಡಾ ಬೆಂಗಳೂರು ಟ್ರಾಫಿಕ್‌ನಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ ಎಂಬ ಶೀರ್ಷಿಕೆಯನ್ನು ಬರೆದಿದ್ದಾರೆ.

ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗುತ್ತಿದ್ದು, ಮಾರತಹಳ್ಳಿ ಸಮೀಪದ ಮುನ್ನೆಕೊಲ್ಲಾಲ ರೈಲ್ವೆ ಕ್ರಾಸಿಂಗ್ ಬಳಿ ವಾಹನ ದಟ್ಟಣೆಯಿಂದದ ಟ್ರಾಫಿಕ್ ಜಾಮ್ ಆಗಿ, ಈ ಟ್ರಾಫಿಕ್ ಜಾಮ್‌ನಲ್ಲಿ ಕ್ರಾಸಿಂಗ್ ದಾಟಲಾಗದೆ ರೈಲು ಕೂಡಾ ಸಿಕ್ಕಿ ಹಾಕಿಕೊಂಡಿರುವುದು ಕಂಡು ಬಂದಿದೆ.

ವಿಡಿಯೋ ವೈರಲ್ ಹಿನ್ನೆಲೆಯಲ್ಲಿ ಸ್ಪಷ್ಟನೆ ನೀಡಿರುವ ಹಿರಿಯ ರೈಲ್ವೇ ಅಧಿಕಾರಿಯೊಬ್ಬರು, ಬೈಯಪ್ಪನಹಳ್ಳಿ ಮತ್ತು ಕಾರ್ಮೆಲಾರಂ ನಡುವೆ ರೇಕ್ ಚೆಕ್ ಮಾಡಲಾಗುತ್ತಿದ್ದು. ಇದರಿಂದಾಗಿ ರೈಲು ನಂ. 12257ನ್ನು ಲೋಕೊ–ಪೈಲಟ್ ನಿಲ್ಲಿಸಿದ್ದರು. ರೇಕ್ ತಪಾಸಣೆ ಬಳಿಕ ಗೇಟ್ ಬಂದ್ ಮಾಡಿ, ರೈಲು ಸಂಚರಿಸಲು ಅನುವು ಮಾಡಿಕೊಡಲಾಯಿತು ಎಂದು ಹೇಳಿದ್ದಾರೆ.



# ಮುಡಾ ಹಗರಣ: ಸಿಬಿಐ ತನಿಖೆಗೆ ಆಗ್ರಹ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿ ಮೂರು ತಿಂಗಳೊಳಗೆ ವರದಿ ಸಲ್ಲಿಸುವಂತೆ ಬೆಂಗಳೂರಿನ ವಿಶೇಷ ನ್ಯಾಯಾಲಯ ಲೋಕಾಯುಕ್ತ ಪೊಲೀಸರಿಗೆ ಸೂಚಿಸಿದ ಬೆನ್ನಲ್ಲೇ ಪ್ರತಿಪಕ್ಷ ಬಿಜೆಪಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರತಿಭಟನೆಗಿಳಿದಿದ್ದು, ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಆಗ್ರಹಿಸಿದೆ.

ಗುರುವಾರ ವಿಧಾನಸೌಧದ ಆವರಣದಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆ ಎದುರು ರಾಜ್ಯ ಬಿಜೆಪಿ ಪ್ರತಿಭಟನೆ ನಡೆಸಲಿದೆ.ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ಪರಿಷತ್ ಪ್ರತಿ ಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ, ಸಂಸದರು, ಶಾಸಕರು, ಎಂ ಎಲ್‌ಸಿಗಳು ಸೇರಿದಂತೆ ಬಿಜೆಪಿಯ ಹಿರಿಯ ಮುಖಂಡರು ಭಾಗವಹಿಸಲಿ ದ್ದಾರೆ ಎಂದು ತಿಳಿದುಬಂದಿದೆ.

ಮುಡಾ ಪ್ರಕರಣ ಮತ್ತು ಎಸ್‌ಟಿ ಅಭಿವೃದ್ಧಿ ನಿಗಮದಲ್ಲಿ ಬಹುಕೋಟಿ ಹಗರಣ ನಡೆದಿದ್ದು, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಹಾಗೂ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಆಗ್ರಹಿಸುತ್ತೇವೆಂದು ಬಿಜೆಪಿ ನಾಯಕರೊಬ್ಬರು ಹೇಳಿದ್ದಾರೆ.

ನ್ಯಾಯಾಲಯದ ತೀರ್ಪು ಹಿನ್ನೆಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು, ಮುಕ್ತ ಮತ್ತು ನಿಷ್ಪಕ್ಷಪಾತ ತನಿಖೆಯನ್ನು ಖಚಿತಪಡಿಸಿಕೊಳ್ಳಲು ಮುಖ್ಯಮಂತ್ರಿಗಳು ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಮತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ಸಿಎಂ ತವರು ಜಿಲ್ಲೆ ಮೈಸೂರಾಗಿದ್ದು, ಅಲ್ಲಿನ ಲೋಕಾಯುಕ್ತ ಪೊಲೀಸರು ನಿಷ್ಪಕ್ಷಪಾತ ತನಿಖೆ ನಡೆಸಲು ಸಾಧ್ಯವಿಲ್ಲ. ಹೈಕೋರ್ಟ್‌ನಿಂದ ತೀರ್ಪು ಹೊರಬಂದಿದ್ದರೂ ಸಿದ್ದರಾಮಯ್ಯ ಅವರು ರಾಜೀನಾಮೆ ಕೊಡಲ್ಲ ಅಂದಿದ್ದಾರೆ. ಆರೋಪಗಳು ಬಂದಿದ್ದರೂ ಏಕೆ ರಾಜೀನಾಮೆ ಕೊಡಬೇಕು ಅಂದಿದ್ದಾರೆ. ಈ ಹಿಂದೆ ಯಡಿಯೂರಪ್ಪ ಅವರ ಮೇಲೆ ಆರೋಪ ಕೇಳಿಬಂದಾಗ ಸಿದ್ದರಾಮಯ್ಯ ವಿಪಕ್ಷ ನಾಯಕರಾಗಿದ್ದರು, ಆಗ ಏನು ಹೇಳಿದ್ದರು ಎಂಬುದನ್ನು ನೆನಪಿಸಿಕೊಳ್ಳಬೇಕು.

ಬಿಜೆಪಿಯು ಇಂತಹ ಭ್ರಷ್ಟ ಸರ್ಕಾರ, ಭ್ರಷ್ಟ ಸಿಎಂ ವಿರುದ್ಧ ನಿರಂತರ ಹೋರಾಟ ಮಾಡಿಕೊಂಡು ಬಂದಿದೆ, ಪಾದಯಾತ್ರೆ ನಡೆಸಿದೆ. ಇದರ ಪರಿಣಾಮ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟರು. ಹೈಕೋರ್ಟ್ ಸಹ ತನಿಖೆ ನಡೆಸಿ ಅಂದಿದೆ. ಈಗ ಜನಪ್ರತಿನಿಧಿಗಳ ಕೋರ್ಟ್ ಸಹ ತನಿಖೆ ಮಾಡಲು ಮೈಸೂರು ಲೋಕಾಯುಕ್ತ ಪೊಲೀಸರಿಗೆ ಸೂಚನೆ ಕೊಟ್ಟಿದೆ. ಯಾವ ನಾಯಕನ ವಿರುದ್ಧ ತನಿಖೆಗೆ ಆದೇಶ ಆಗಿದೆಯೋ ಆ ವ್ಯಕ್ತಿ ರಾಜ್ಯದ ಸಿಎಂ. ಇಂತಹ ಸಂದರ್ಭದಲ್ಲಿ ಪಾರದರ್ಶಕ ತನಿಖೆ ನಡೆಯುವುದು ಅನುಮಾನ. ಹಾಗಾಗಿ ಕೋರ್ಟ್ ತೀರ್ಪುಗಳನ್ನು ಒಪ್ಪಿಕೊಂಡು ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಡಲಿ. ರಾಜೀನಾಮೆ ಕೊಟ್ಟು ಸಿದ್ದರಾಮಯ್ಯ ತನಿಖೆಗೆ ಸಹಕರಿಸಲಿ ಎಂದು ಒತ್ತಾಯಿಸಿದರು.

ಸಿಎಂ ವಿರುದ್ಧವೇ ಆರೋಪ ಕೇಳಿಬಂದಾಗ ಲೋಕಾಯುಕ್ತ ಪೊಲೀಸರಿಂದ ಪ್ರಾಮಾಣಿಕ ತನಿಖೆ ಮಾಡಲು ಸಾಧ್ಯವೇ? ಲೋಕಾಯುಕ್ತ ಪೊಲೀಸರಿಂದ ನ್ಯಾಯಬದ್ಧ ತನಿಖೆ ಅಸಾಧ್ಯ. ಕೋರ್ಟ್ ಆದೇಶ ಮಾಡಿರಬಹುದು, ಆದರೆ ತನಿಖೆ ಪಾರದರ್ಶಕ ಆಗುತ್ತಾ? ಹೀಗಾಗಿ ಸಿದ್ದರಾಮಯ್ಯ ಅವರು ಸಿಬಿಐಗೆ ಮುಡಾ ಪ್ರಕರಣ ವಹಿಸಬೇಕು. ಸ್ವತಂತ್ರ ತನಿಖಾ ಸಂಸ್ಥೆಯಿಂದಲೇ ಮುಡಾ ಪ್ರಕರಣ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ಸಿದ್ದರಾಮಯ್ಯನವರು ನನ್ನ ಜೊತೆ ಪಕ್ಷ ಇದೆ, ಶಾಸಕರು ಇದ್ದಾರೆ ಎಂದು ಹೇಳುತ್ತಿದ್ದಾರೆ. ಅದು ನಿಜವಾಗಿದ್ದರೆ ಭ್ರಷ್ಟಾಚಾರಕ್ಕೆ ಅವರ ಪಕ್ಷದವರು ಸಾಥ್ ಕೊಡುತ್ತಿದ್ದಾರೆಂದು ಅರ್ಥವೇ? ಸಿದ್ದರಾಮಯ್ಯ ತಡಮಾಡದೇ ಸಿಬಿಐ ತನಿಖೆಗೆ ಆದೇಶ ಮಾಡಬೇಕು. ತಕ್ಷಣ ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು. ಅದಕ್ಕಾಗಿ ಗುರುವಾರ ಬಿಜೆಪಿ ಶಾಸಕರು, ಸಂಸದರು ಪ್ರತಿಭಟನೆ ಹಮ್ಮಿಕೊಂಡಿದ್ದೇವೆ ಎಂದು ಹೇಳಿದರು.

# UPSC ಮಾದರಿಯಲ್ಲಿ KPSC ಪರೀಕ್ಷೆ ನಡೆಸಿ: ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಸೂಚನೆ

ಬೆಂಗಳೂರು: ಯುಪಿಎಸ್‌ಸಿ ಮಾದರಿಯಲ್ಲೇ ಕೆಪಿಎಸ್‌ಸಿ ಪರೀಕ್ಷೆ ನಡೆಸಲು ಅಗತ್ಯ ಕ್ರಮಗಳ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಸೂಚನೆ ನೀಡಿದರು.

ಮುಖ್ಯಮಂತ್ರಿಗಳು ವಿಧಾನಸೌಧದಲ್ಲಿ ಸರ್ಕಾರದ ವತಿಯಿಂದ ವಿವಿಧ ನೇಮಕಾತಿಗಳ ಪ್ರಗತಿ ಪರಿಶೀಲನೆ ನಡೆಸಿದರು.

ಈ ವೇಳೆ ನೇಮಕಾತಿ ಪ್ರಕ್ರಿಯೆಗಳ ವಿಳಂಬ, ಕಾನೂನು ತೊಡಕುಗಳು ಹಾಗೂ 371 ಜೆ ಅಡಿ ಮೀಸಲಾತಿಗೆ ಸಂಬಂಧಿಸಿದ ಸವಾಲುಗಳ ಕುರಿತು ಚರ್ಚೆ ನಡೆಸಿದರು.

ಪ್ರತಿವರ್ಷ ಎಲ್ಲ ಇಲಾಖೆಗಳ ನೇಮಕಾತಿಗೆ ಏಕಕಾಲಕ್ಕೆ ಅಧಿಸೂಚನೆ ಹೊರಡಿಸಲು ಅನುವಾಗುವಂತೆ ಎಲ್ಲ ಇಲಾಖೆಗಳು ನಿಗದಿತ ಗಡುವಿನೊಳಗೆ ನೇಮಕಾತಿ ಕುರಿತು ಪ್ರಸ್ತಾವನೆಗಳನ್ನು ಸಲ್ಲಿಸಬೇಕು. ಪರೀಕ್ಷಾ ವೇಳಾಪಟ್ಟಿಯಲ್ಲಿ ಫಲಿತಾಂಶ ಪ್ರಕಟಣೆಯ ದಿನಾಂಕ ನಿಗದಿಪಡಿಸಲು ತಿಳಿಸಿದರು.

ಬಳಿಕ ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳ ನೇಮಕಾತಿಗೆ ಸಂಬಂಧಿಸಿದಂತೆ ಇರುವ ಗೊಂದಲಗಳ ಕುರಿತು ಸವಿಸ್ತಾರವಾಗಿ ಪರಿಶೀಲಿಸಿ, ಸಚಿವ ಸಂಪುಟ ಉಪಸಮಿತಿಯ ಆದೇಶಗಳ ಪಾಲನೆಯ ಕುರಿತು ಸಹ, ಸಚಿವ ಸಂಪುಟದ ಮುಂದೆ ವಿಷಯ ಮಂಡಿಸಲು ಸೂಚಿಸಿದರು.

ಸಚಿವ ಸಂಪುಟ ಉಪ ಸಮಿತಿಯ ಸೂಚನೆಗಳನ್ನು ಇಲಾಖಾ ಮುಖ್ಯಸ್ಥರು ಪಾಲಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು. ತಪ್ಪಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿ ನೇಮಕಾತಿ ಪ್ರಕ್ರಿಯೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ



ಕಲ್ಯಾಣ ಕರ್ನಾಟಕ ಕೋಶದ ಸಹಮತಿಯೊಂದಿಗೆ ಅಧಿಸೂಚನೆ ಹೊರಡಿಸಬೇಕೆಂದು ಸೂಚನೆ ನೀಡಿದರು.

ಅಂತಿಮ ಆಯ್ಕೆ ಪಟ್ಟಿ ಪ್ರಕಟವಾದ ನಂತರ ಸಿಂಧುತ್ವ ಪ್ರಮಾಣ ಪತ್ರ ನೀಡುವಲ್ಲಿ ವಿಳಂಬವಾಗುವುದರಿಂದ ನೇಮಕಾತಿ ಆದೇಶ ನೀಡುವಲ್ಲಿಯೂ ವಿಳಂಬವಾಗುತ್ತಿದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಬಗ್ಗೆ ಇಲಾಖಾ ಮುಖ್ಯಸ್ಥರು, ಪ್ರತಿ ವಾರ ಪರಿಶೀಲನೆ ಮಾಡಬೇಕು. ಸುತ್ತೋಲೆಗಳ ಕೈಪಿಡಿಗಳನ್ನು ಸಂಬಂಧಿಸಿದ ಅಧಿಕಾರಿಗಳಿಗೆ ಕಳುಹಿಸಬೇಕೆಂದು ಸೂಚಿಸಿದರು.

# ಮುಡಾಹಗರಣ: ಸಿದ್ದರಾಮಯ್ಯ ಪುತ್ರ, ಪತ್ನಿ ವಿರುದ್ಧ ಎಫ್‌ಐಆರ್ ದಾಖಲಿಸಿ: ಲೋಕಾಯುಕ್ತಕ್ಕೆ ಪ್ರದೀಪ್ ಕುಮಾರ್ ದೂರು



ಮೈಸೂರು: ಮುಡಾ ಹಗರಣ ಪ್ರಕಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಹೈಕೋರ್ಟ್ ತನಿಖೆಗೆ ಅಸ್ತು ಎಂದ ಬೆನ್ನಲ್ಲೇ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಪುತ್ರ ಡಾ. ಯತೀಂದ್ರ ವಿರುದ್ಧ ತಕ್ಷಣವೇ ಎಫ್‌ಐಆರ್ ದಾಖಲಿಸುವಂತೆ ಒತ್ತಾಯಿಸಿ ದೂರುದಾರರಲ್ಲಿ ಒಬ್ಬರಾದ ಪ್ರದೀಪ್ ಕುಮಾರ್ ಅವರು ಬುಧವಾರ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ.

ಜೆಡಿಎಸ್ ಮುಖಂಡರ ಜೊತೆ ಮೈಸೂರಿನ ಲೋಕಾಯುಕ್ತ ಕಚೇರಿಗೆ ತೆರಳಿದ ಪ್ರದೀಪ್ ಕುಮಾರ್ ಅವರು, ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯ, ಪಾರ್ವತಿ ಸಿದ್ದರಾಮಯ್ಯ, ಮಲ್ಲಿಕಾರ್ಜುನ ಮೇಲೆ ಎಫ್‌ಐಆರ್ ಹಾಕಬೇಕು ಎಂದು ದೂರು ನೀಡಿದರು.

ಇದೇ ವೇಳೆ ಈ ಹಿಂದಿನ ದೂರುಗಳ ಬಗ್ಗೆ ಏನು ಕ್ರಮ ತೆಗೆದುಕೊಂಡಿದ್ದೀರಿ ಎಂಬ ಬಗ್ಗೆ ಹಿಂಬರಹ ನೀಡುವಂತೆ ಪ್ರದೀಪ್ ಕುಮಾರ್ ಒತ್ತಾಯಿಸಿದರು. ಆದರೆ, ಈಗ ಕೊಡಲು ಸಾಧ್ಯವಿಲ್ಲ. ಹಿರಿಯ ಅಧಿಕಾರಿಗಳ ಸಲಹೆ ಪಡೆದು ಹಿಂಬರಹ ಕೊಡುತ್ತೇನೆ ಎಂದು ಲೋಕಾಯುಕ್ತ ಎಸ್‌ಪಿ ತಿಳಿಸಿದ್ದು, ಇದಕ್ಕೆ ಪ್ರದೀಪ್ ಕುಮಾರ್ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಕಾನೂನು ತಜ್ಞರ ಸಲಹೆ ಪಡೆದು ಹಿಂಬರಹ ನೀಡುತ್ತೇವೆ. ಇದುವರೆಗಿನ ತನಿಖಾ ವರದಿಯ ಕುರಿತು ಮಾಹಿತಿ ನೀಡುತ್ತೇವೆ ಎಂದು ಹೇಳಿದ್ದಾರೆ. ನಾನು ಇನ್ನು 3 ದಿನ ಬಿಟ್ಟು ಮತ್ತೆ ಮೈಸೂರಿಗೆ ಬರುತ್ತೇನೆ. ಮೂರು ದಿನದಲ್ಲಿ ಉತ್ತರ ಬಾರದೆ ಇದ್ದರೆ ಮೈಸೂರು ಲೋಕಾಯುಕ್ತ ಎಸ್ ಪಿ ವಿರುದ್ದ ಕಾನೂನು ಹೋರಾಟ ಮಾಡುತ್ತೇನೆ. ನಮ್ಮ ದೂರಿಗೆ ಹಿಂಬರಹ ನೀಡಲು ಇಷ್ಟೊಂದು ಸಮಯ ಕೇಳುತ್ತಿದ್ದಾರೆ. ಇನ್ನು ತನಿಖೆ ಯಾವ ರೀತಿ ಮಾಡುತ್ತಾರೆ ಎಂಬ ಪ್ರಶ್ನೆ ನಮಗೆ ಕಾಡುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

17ಎ ಅಡಿಯಲ್ಲಿ ತನಿಖಾಧಿಕಾರಿ ಸ್ವತಂತ್ರವಾಗಿ ತನಿಖೆ ಮಾಡಬಹುದು ಎಂದು ಹೇಳಲಾಗಿದೆ. ಈ ಅಂಶದ ಆಧಾರದ ಮೇಲೆ ನನ್ನ ದೂರಿನ ಅನ್ವಯ ಆರೋಪಿಗಳ ವಿರುದ್ಧ ಎಫ್‌ಐಆರ್ ದಾಖಲು ಮಾಡಬಹುದು. ಸಿದ್ದರಾಮಯ್ಯ, ಯತೀಂದ್ರ ಸಿದ್ದರಾಮಯ್ಯ, ಪಾರ್ವತಿ ಸಿದ್ದರಾಮಯ್ಯ, ಮಲ್ಲಿಕಾರ್ಜುನ ಸ್ವಾಮಿ ಸೇರಿದಂತೆ ಇತರ ಅಧಿಕಾರಿಗಳ ಮೇಲೆ ಎಫ್‌ಐಆರ್ ದಾಖಲು ಮಾಡಬೇಕು. ಲೋಕಾಯುಕ್ತ ಅಧಿಕಾರಿಗಳ ನಡೆಯನ್ನ ಗಮನಿಸಿದರೆ ಸಿಎಂ ಅವರ ಒತ್ತಡಕ್ಕೆ ಒಳಗಾದಂತೆ ಕಾಣುತ್ತಿದೆ. ನಾನು ಈ ಬಗ್ಗೆ ಹೈಕೋರ್ಟ್‌ನಲ್ಲಿ ರಿಟ್ ಸಲ್ಲಿಸುವ ಚಿಂತನೆಯಲ್ಲಿದ್ದೇನೆಂದು ತಿಳಿಸಿದರು.

# ಸಿಎಂ ರಾಜೀನಾಮೆಗೆ ಪಕ್ಷದೊಳಗೆ ಯಾವುದೇ ಒತ್ತಡವಿಲ್ಲ: ಸಚಿವ ಪರಮೇಶ್ವರ್

ಬೆಂಗಳೂರು: ಹೈಕೋರ್ಟ್ ತೀರ್ಪಿನ ಬಳಿಕ ಸಿದ್ದರಾಮಯ್ಯ ವೀಕ್ ಆಗಿಲ್ಲ, ಕಲ್ಲುಬಂಡೆಯಂತೆ ಗಟ್ಟಿಯಾಗಿದ್ದು, ರಾಜೀನಾಮೆ ನೀಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಬುಧವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜೀನಾಮೆ ನೀಡುವುದಿಲ್ಲ. ಪಕ್ಷದಲ್ಲಿ ಅಂತಹ ಮಾತುಕತೆಯಾಗಲೀ, ಒತ್ತಡವಾಗಲೀ ಇಲ್ಲ. ಪಕ್ಷದ ಹೈಕಮಾಂಡ್ ಕೂಡ ಸಿಎಂಗೆ ಬೆಂಬಲ ನೀಡುತ್ತಿದೆ ಎಂದು ಸ್ಪಷ್ಟಪಡಿಸಿದರು,

ಕೆಸಿ ವೇಣುಗೋಪಾಲ್ ಮತ್ತು ಸುರ್ಜೇವಾಲಾ ಕೂಡ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಅವರೆಲ್ಲ ಸಿಎಂ ಜೊತೆಗಿದ್ದಾರೆ ಮುಡಾ ಹಗರಣದಲ್ಲಿ ಸಿಎಂ ಪಾತ್ರವಿಲ್ಲ. ಕಾನೂನು ಹೋರಾಟಕ್ಕೆ ಅವಕಾಶವಿರುವುದರಿಂದ ರಾಜೀನಾಮೆ ನೀಡುವ ಅಗತ್ಯವಿಲ್ಲ. ಸಿದ್ದರಾಮಯ್ಯ ಅವರು ಯಾವುದೇ ಕಡತ ಅಥವಾ ದಾಖಲೆಗಳಿಗೆ ಸಹಿ ಹಾಕಿಲ್ಲ, ಯಾವುದೇ ಅಧಿಕಾರವನ್ನೂ ದುರುಪಯೋಗಪಡಿಸಿಕೊಂಡಿಲ್ಲ. ಇದನ್ನು ಆಧರಿಸಿಯೇ ಅವರು ನ್ಯಾಯಾಲಯದ ಮೊರೆ ಹೋಗಿದ್ದಾರೆ. ನ್ಯಾಯಾಲಯದ ಆದೇಶ ನಮ್ಮ ಪರವಾಗಿ ಬಂದಿಲ್ಲ. ನಾವು ಆದೇಶವನ್ನು ಗೌರವಿಸುತ್ತೇವೆ. ಆದರೆ, ನಮಗೆ ನ್ಯಾಯ ಸಿಕ್ಕಿಲ್ಲ ಎಂಬುದು ನಮ್ಮ ಭಾವನೆ. ನಮ್ಮ ಕಾನೂನು ಹೋರಾಟ ಮುಂದುವರೆಯಲಿದೆ ಸಿಎಂ ಕೂಡ ಹೇಳಿದ್ದಾರೆ ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್ ಅಥವಾ ಹೈಕೋರ್ಟ್ ವಿಭಾಗೀಯ ಪೀಠ ಮೊರೆ ಹೋಗುವ ಕುರಿತು ಮುಂದಿನ ದಿನಗಳಲ್ಲಿ ನಿರ್ಧರಿಸಲಾಗುತ್ತದೆ. ಸಿಎಂಗೆ 40 ರಿಂದ 45 ವರ್ಷ ರಾಜಕೀಯ ಜೀವನದಲ್ಲಿ ಯಾವುದೇ ಆಪಾದನೆ ಇರಲಿಲ್ಲ. ಇದು ರಾಜಕೀಯ ಪ್ರೇರಿತ ಎನ್ನುವ ನೋವಾಗಿದೆ. ರಾಜ್ಯಪಾಲರು ಕ್ಯಾಬಿನೆಟ್ ನಿರ್ಣಯ ಪಾಲಿಸಬೇಕು ಎನ್ನುವ ಮಾತಿದೆ. ವಿವೇಚನೆ ಬಳಸಬಹುದು ಅಂತಲೂ ಇದೆ. ಅದಕ್ಕೆ ಸಮರ್ಥನೆ ಕೂಡ ಕೊಡಬೇಕು. ತೀರ್ಪಿನಲ್ಲಿ ರಾಜ್ಯಪಾಲರ ನಿರ್ಧಾರಕ್ಕೆ ಸಮರ್ಥನೆ ಕಾಣಲಿಲ್ಲ. ಜಡ್ಜ್ಮೆಂಟ್‌ನಲ್ಲಿ ಸಮರ್ಥನೆ ಇದೆ ಎಂದಿದ್ದಾರೆ. ಕೋರ್ಟ್ ತೀರ್ಪು ನಮಗೆ ಸಮಾಧಾನ ತಂದಿಲ್ಲ ಎಂದರು.

ರಾಜ್ಯಪಾಲರಿಗೆ ಬಲ ಬಂದಿದೆ ಎನ್ನಬಹುದು. ಆದರೆ, ಇದು ಎಲ್ಲರಿಗೂ ಅನ್ವಯವಾಗಬೇಕಲ್ಲ. ಮಾಜಿ ಸಿಎಂ ಕುಮಾರಸ್ವಾಮಿ, ಶಶಿಕಲಾ ಜೊಲ್ಲೆ ಎಲ್ಲರ ವಿಚಾರದಲ್ಲಿಯೂ ಇರಬೇಕಲ್ವಾ. ಆ ಬಲ ಅಲ್ಲಿಯೂ ಉಪಯೋಗಿಸಬೇಕಲ್ಲ ಎಂದು ಪ್ರಶ್ನಿಸಿದರು.

ಸಿಎಂ ರಾಜೀನಾಮೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ ವಿಚಾರವಾಗಿ ಮಾತನಾಡಿ, ಬಿಜೆಪಿ ಉದ್ದೇಶವೇ ಸಿಎಂ ರಾಜೀನಾಮೆ ಕೊಡಿಸಬೇಕು ಅನ್ನೋದು. ಹಾಗಾಗಿ ಅವರ ಹೋರಾಟ ಆಶ್ಚರ್ಯ ಏನಿಲ್ಲ. ರಾಜೀನಾಮೆ ಕೊಡಬೇಡಿ ಎಂದು ನಾವು ಈಗಾಗಲೇ ಸಿಎಂಗೆ ಹೇಳಿದ್ದೇವೆ ಎಂದರು.

# ರಾಜೀವ್‌ಗಾಂಧಿ ವಿಶ್ವವಿದ್ಯಾಲಯ ರಾಮನಗರಕ್ಕೆ ಸ್ಥಳಾಂತರ: ಡಿಸಿಎಂ ಡಿ.ಕೆ. ಶಿವಕುಮಾರ್



ಬೆಂಗಳೂರು: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು (ಆರ್‌ಜಿಯುಎಚ್‌ಎಸ್) ರಾಮನಗರ ಕ್ಯಾಂಪಸ್‌ಗೆ ಸ್ಥಳಾಂತರಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬುಧವಾರ ಘೋಷಿಸಿದರು.

ರಾಮನಗರ ಮತ್ತು ಕನಕಪುರದಲ್ಲಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸುವ ಕುರಿತು ಬುಧವಾರ ಸಭೆ ನಡೆಸಿದ ಬಳಿಕ ಉಪ ಮುಖ್ಯಮಂತ್ರಿಗಳು ಸುದ್ದಿಗಾರರ ಜತೆ ಮಾತನಾಡಿದರು.

ರಾಮನಗರ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಭೂ ಮಂಜೂರಾತಿ ವಿಷಯ ಬಗೆ ಹರಿದಿದ್ದು, ಕಾಮಗಾರಿ ನಡೆಯುತ್ತಿದೆ. ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಅಗತ್ಯವಿರುವ ಎಲ್ಲ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ಹಿಂದಿನ ಸರ್ಕಾರದ ಆದೇಶದಂತೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ರಾಮನಗರಕ್ಕೆ ಸ್ಥಳಾಂತರಿಸಲು ನಿರ್ಧರಿಸಿದ್ದೇವೆ. ಇದನ್ನು ಹಂತಹಂತವಾಗಿ ಕಾರ್ಯಗತಗೊಳಿಸಲಾಗುವುದು ಎಂದು ಹೇಳಿದರು.

ಕನಕಪುರದಲ್ಲಿ ಮೆಡಿಕಲ್ ಕಾಲೇಜು ಸ್ಥಾಪಿಸಲು ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿತ್ತು. ಗೃಹ ಮಂಡಳಿಯಿಂದ ಜಮೀನು ಪಡೆದು ಕಾಲೇಜು ಕಟ್ಟಡ ನಿರ್ಮಾಣ ಮಾಡಲಾಗುವುದು. ಕನಕಪುರದಲ್ಲಿ ಮೂಲಸೌಕರ್ಯ ಇಲ್ಲ ಎಂದು ಎನ್‌ಎಂಸಿಯಿಂದ ಅರ್ಜಿ ತಿರಸ್ಕರಿಸಲಾಗಿತ್ತು. ಹೀಗಾಗಿ ಮೂಲಸೌಕರ್ಯ ಹೆಚ್ಚಿಸಿ ಮತ್ತೆ ಹೊಸದಾಗಿ ಅರ್ಜಿ ಸಲ್ಲಿಸಲು ಇಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಹಿಂದೆ ಕನಕಪುರದಲ್ಲಿ ಮೆಡಿಕಲ್ ಕಾಲೇಜು ಆರಂಭಿಸಲು ಟೆಂಡರ್ ಕರೆದು ಭೂಮಿ ಪೂಜೆ ಮಾಡಲಾಗಿತ್ತು. ನಂತರ ಯಡಿಯೂರಪ್ಪನವರ ಸರ್ಕಾರದಲ್ಲಿ ಮಾಜಿ ಸಚಿವ ಸುಧಾಕರ್ ಅವರು ಚಿಕ್ಕಬಳ್ಳಾಪುರಕ್ಕೆ ಆ ಮೆಡಿಕಲ್ ಕಾಲೇಜು ತೆಗೆದುಕೊಂಡು ಹೋದರು. ಆಗ ರೂ.450 ಕೋಟಿ ಇದ್ದ ಮೆಡಿಕಲ್ ಕಾಲೇಜು ನಿರ್ಮಾಣ ವೆಚ್ಚ ರೂ.850 ಕೋಟಿಗೆ ಏರಿಕೆಯಾಗಿದೆ.

ಬಿಜೆಪಿ ದ್ವೇಷದ ರಾಜಕಾರಣ ಮಾಡಿದೆ. ನಾವು ಬಜೆಟ್‌ನಲ್ಲಿ ಇದನ್ನು ಘೋಷಿಸಿದ್ದು, ಇದನ್ನು ಹಂತ ಹಂತವಾಗಿ ಪೂರ್ಣಗೊಳಿಸುತ್ತೇವೆ. ಕಾಲೇಜು ನಿರ್ಮಾಣಕ್ಕೆ ಅನುಮತಿ ನೀಡುವಂತೆ ಮರು ಅರ್ಜಿ ಹಾಕುತ್ತೇವೆ. ರಾಮನಗರದಲ್ಲಿನ ಕಟ್ಟಡ ಕಾಮಗಾರಿಗೆ ರೂ.600 ಕೋಟಿ ಬಿಡುಗಡೆಯಾಗಿದ್ದು, ಕೆಲಸ ಭರದಿಂದ ಸಾಗುತ್ತಿದೆ. ನಾವು ಅಭಿವೃದ್ಧಿ ವಿಚಾರದಲ್ಲಿ ರಾಜಕಾರಣ ಮಾಡುವುದಿಲ್ಲ. ರಾಜೀವ್ ಗಾಂಧಿ ವಿವಿ ಕೇಂದ್ರ ಕಚೇರಿ ರಾಮನಗರದಲ್ಲಿ ನಿರ್ಮಾಣ ಮಾಡಬೇಕು ಎಂದು 2008ರಲ್ಲೇ ಸರ್ಕಾರದ ಆದೇಶ ಹೊರಡಿಸಿ ಬಿಲ್ ಮಂಡಿಸಲಾಗಿದೆ. ಇದನ್ನು ಹಂತ ಹಂತವಾಗಿ ಸ್ಥಳಾಂತರ ಮಾಡಲಾಗುವುದು ಎಂದು ತಿಳಿಸಿದರು.

ಡಿಸಿಎಂ ಡಿ.ಕೆ ಶಿವಕುಮಾರ್

ರಾಜ್ಯದ ಮೊದಲ ನೈಸರ್ಗಿಕ ಅನಿಲ ಆಧಾರಿತ ವಿದ್ಯುತ್ ಸ್ಥಾವರ ಲೋಕಾರ್ಪಣೆ: 2030ಕ್ಕೆ 60,000 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಗುರಿ

ಕರ್ನಾಟಕ ದೇಶದ ಪ್ರಮುಖ ಆರೋಗ್ಯ ಪ್ರವಾಸೋದ್ಯಮ ಕೇಂದ್ರ: ಡಿಸಿಎಂ

ಕರ್ನಾಟಕ ಭಾರತದ ಪ್ರಮುಖ ಆರೋಗ್ಯ ಪ್ರವಾಸೋದ್ಯಮ ಕೇಂದ್ರವಾಗಿದ್ದು, ದೇಶದಲ್ಲೇ ಅತೀ ಹೆಚ್ಚು 70 ಕ್ಕೂ ಹೆಚ್ಚು ವೈದ್ಯಕೀಯ ಕಾಲೇಜುಗಳನ್ನು ಹೊಂದಿದೆ ಎಂದು ಡಿಕೆ.ಶಿವಕುಮಾರ್ ಅವರು ಹೇಳಿದರು.

ನಗರದ ವೈಟ್‌ಫೀಲ್ಡ್‌ನಲ್ಲಿ ಸಮಗ್ರ ಆರೋಗ್ಯ ಸೇವಾ ಸೌಲಭ್ಯ ಹೊಂದಿರುವ ಮೆಡಿಕವರ್ ಆಸ್ಪತ್ರೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಪ್ರತಿ ವರ್ಷ 13,000 ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣ ಪಡೆಯುತ್ತಾರೆ. 1 ಲಕ್ಷಕ್ಕೂ ಹೆಚ್ಚು ಅರೆವೈದ್ಯಕೀಯ ಸಿಬ್ಬಂದಿಗೆ ತರಬೇತಿ ನೀಡಲಾಗುತ್ತಿದ್ದು, ಬೆಂಗಳೂರಿನಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಹಲವು ಅವಕಾಶಗಳಿವೆ. ಮೆಡಿಕವರ್ ಆಸ್ಪತ್ರೆಯು ಆರೋಗ್ಯ ಕ್ಷೇತ್ರದಲ್ಲಿ ಒಂದು ಹೊಸ ಬದಲಾವಣೆ ತರುವಲ್ಲಿ ಮುಖ್ಯ ಪಾತ್ರ ವಹಿಸಲಿದ್ದು, ಈಗಾಗಲೇ ತಮಿಳುನಾಡು, ಆಂಧ್ರಪ್ರದೇಶ, ಮಹಾರಾಷ್ಟ್ರ ರಾಜ್ಯಗಳಲ್ಲಿ ತನ್ನ ಆರೋಗ್ಯ ಸೇವೆ ಪ್ರಾರಂಭಿಸಿದೆ.

ಮುಂದಿನ ದಿನಗಳಲ್ಲಿ ದೇಶದ ಇತರೆ ರಾಜ್ಯಗಳಲ್ಲಿ ತನ್ನ ಸೇವೆ ವಿಸ್ತರಿಸಲಿದೆ. ನಮ್ಮ ದೇಶ ಹಾಗೂ ವಿಶ್ವದಲ್ಲಿ ಆರೋಗ್ಯ ವ್ಯವಸ್ಥೆಯಲ್ಲಿ ಮಹತ್ತರ ಬದಲಾವಣೆಗಳಾಗುತ್ತಿದ್ದು, ಇದರಿಂದ ಎಲ್ಲರಿಗೂ ಉತ್ತಮ ಆರೋಗ್ಯ ಸೇವೆಗಳು ಸಿಗುತ್ತಿವೆ. ಜನರ ಸೇವೆ ಮಾಡುವುದು ನಮ್ಮ ಮೂಲ ಧ್ಯೇಯ. ವೈದ್ಯಕೀಯ ಕ್ಷೇತ್ರದ ಬೆಳವಣಿಗೆಗೆ ನಮ್ಮ ಸರ್ಕಾರ ಬದ್ಧವಾಗಿದ್ದು, ಕರ್ನಾಟಕದಲ್ಲಿ ಹೆಚ್ಚಿನ ಆಸ್ಪತ್ರೆಗಳನ್ನು ನಿರ್ಮಿಸಲು ನಾವು ಕೈ ಜೋಡಿಸುತ್ತೇವೆ ಎಂದು ಹೇಳಿದರು.

# ಚಿಕ್ಕಬಳ್ಳಾಪುರ: ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿಯಾಗಿ ಮೂವರು ವಿದ್ಯಾರ್ಥಿಗಳು ದುರ್ಮರಣ

ಚಿಕ್ಕಬಳ್ಳಾಪುರ: ಟ್ರ್ಯಾಕ್ಟರ್‌ಗೆ ಬೈಕ್ ಡಿಕ್ಕಿಯಾಗಿ ಮೂವರು ವಿದ್ಯಾರ್ಥಿಗಳು ಮೃತಪಟ್ಟಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಗೇರಹಳ್ಳಿ ಗೇಟ್ ಬಳಿ ನಡೆದಿದೆ.

ಮೃತರನ್ನು ಅವಲಗುರ್ಕಿ ಗ್ರಾಮದ 17 ವರ್ಷದ ನಿತೀಶ್, 17 ವರ್ಷದ ನಿತಿನ್ ಹಾಗೂ ವೈಭವ್ ಎಂದು ತಿಳಿದುಬಂದಿದೆ. ಟ್ಯೂಷನ್ ಮುಗಿಸಿಕೊಂಡು ಒಂದೇ ಬೈಕಿನಲ್ಲಿ ಮೂವರು ಮನೆಗೆ ತೆರಳುತ್ತಿದ್ದಾಗ ಅಪಘಾತ ಸಂಭವಿಸಿದೆ.

ಬಿಜಿಎಸ್ ಶಾಲೆಯಲ್ಲಿ ನಿತೀಶ್ ಹಾಗೂ ನಿತಿನ್ ಪಿಯುಸಿ ವ್ಯಾಸಂಗ ಮಾಡುತ್ತಿದ್ದರೆ, ವೈಭವ್ ಗುಡ್ ಶೆರ್ಡ್ ಶಾಲೆಯಲ್ಲಿ ಖಖಐಅ ವ್ಯಾಸಂಗ ಮಾಡುತ್ತಿದ್ದನು. ಅಪಘಾತ ಸಂಬಂಧ ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.



# ಕಿಡ್ನಿ ವೈಫಲ್ಯಕ್ಕೆ ಮಧುಮೇಹ ರೋಗವೇ ಹೆಚ್ಚು ಕಾರಣ: ಬಿ.ಟಿ.ಅನಿಲ್‌ಕುಮಾರ್



ಮಂಡ್ಯ: ಕಿಡ್ನಿ ವೈಫಲ್ಯಕ್ಕೆ ಮಧುಮೇಹ ರೋಗವೇ ಹೆಚ್ಚು ಕಾರಣ ಎಂದು ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಮೂತ್ರಪಿಂಡ ವಿಭಾಗದ ಮುಖ್ಯಸ್ಥ ಡಾಕ್ಟರ್ ಬಿ.ಟಿ.ಅನಿಲ್‌ಕುಮಾರ್ ತಿಳಿಸಿದರು .

ಮಂಡ್ಯದ ಪತ್ರಕರ್ತರ ಭವನದಲ್ಲಿ ಮಂಡ್ಯ ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ನಡೆದ ಕಿಡ್ನಿ ವೈಫಲ್ಯ ಕುರಿತ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ದೇಶದಲ್ಲಿ ಡಯಾಬಿಟಿಸ್ ರೋಗಿಗಳ ಸಂಖ್ಯೆ ದಿನ ಕಳೆದಂತೆ ಹೆಚ್ಚಾಗುತ್ತಿದ್ದು ಮುಖ್ಯವಾಗಿ ಕಿಡ್ನಿ ವೈಫಲ್ಯಕ್ಕೆ ಡಯಾಬಿಟಿಸ್ ಕಾರಣ ಎಂದರು .

100 ಮಂದಿ ಮಧುಮೇಹಿಗಳಲ್ಲಿ ಸುಮಾರು 18 ಜನರಿಗೆ ಕಿಡ್ನಿ ವಿಫಲತೆ ಕಂಡುಬರಬಹುದು. ಕಿಡ್ನಿ ವೈಫಲ್ಯಕ್ಕೆ ಕಿಯಾಟಿನ್ ಪರೀಕ್ಷೆ ಮಾಡಿಸಿದ ನಂತರ ಈ ರೋಗಕ್ಕೆ ಚಿಕಿತ್ಸೆ ನೀಡಬಹುದು ಎಂದು ತಿಳಿಸಿದರು.

ಒತ್ತಡದಿಂದಲೂ ಕಿಡ್ನಿ ಸಮಸ್ಯೆ ಎದುರಾಗಬಹುದು. ಈ ರೋಗ ಕೊನೆ ಸ್ಟೇಜಿಗೆ ಬಂದಾಗ ಅರಿವಾಗುತ್ತದೆ ಎಂದು ತಿಳಿಸಿದರು. ಭಾರತದಲ್ಲಿ 10 ಲಕ್ಷ ಮಂದಿಗೆ 800 ಜನರಲ್ಲಿ ಕಿಡ್ನಿ ಸಮಸ್ಯೆ ಕಂಡು ಬರುತ್ತದೆ. ಐದು ಹಂತದಲ್ಲಿ ಈ ಸಮಸ್ಯೆ ಬರುತ್ತದೆ. ಕಿಡ್ನಿ ವೈಫಲ್ಯಕ್ಕೆ ಜೀವಿತಾವಧಿ ಡಯಾಲಿಸಿಸ್ ಮಾಡಿಸ 'ಬೇಕಾಗುತ್ತದೆ. ಆದರೆ ಕಿಡ್ನಿ ಟ್ರಾನ್ಸ್ ಪ್ಲಾಂಟ್ ಮಾಡಿದರೆ ಡಯಾಲಿಸಿಸ್ ಸಮಸ್ಯೆ ಎದುರಾಗುವುದಿಲ್ಲ ಎಂದರು .

10 ವರ್ಷದ ಹಿಂದೆ ಟ್ರಾನ್ಸ್ ಪ್ಲಾಂಟ್ ಸೌಲಭ್ಯ ಇರಲಿಲ್ಲ. ಈಗ ಎಲ್ಲಾ ತಾಲೂಕು ಮತ್ತು ಜಿಲ್ಲಾ ಕೇಂದ್ರದಲ್ಲಿ ಈ ಸೌಲಭ್ಯಗಳಿದೆ ಎಂದು ತಿಳಿಸಿದರು .

ಹಿಮೋ ಮತ್ತು ಪೆರಿಟೋರಿಯಲ್ ಎನ್ನುವ ಎರಡು ಬಗೆಯಲ್ಲಿ ಡಯಾಲಿಸಿಸ್ ಮಾಡಬಹುದು. ಇದಕ್ಕಿಂತ ಉತ್ತಮ ಎಂದರೆಕಿಡ್ನಿಕಸಿ ಮಾಡಿಸುವುದು ಎಂದರು. ವ್ಯಕ್ತಿಯ ಬ್ರೈನ್ ಡೆಡ್ ಆದಾಗ ಅವರ ಕುಟುಂಬದವರು ಸಮಲೋಚನೆ ನಡೆಸಿ ಅಂಗಾಂಗವನ್ನು ದಾನ ಮಾಡಿದರೆ ಅದನ್ನು ತೆಗೆದುಕೊಳ್ಳಬಹುದು. ಭಾರತದಲ್ಲಿ ಒಂದೇ ಕುಟುಂಬದವರಿಂದ ಕಿಡ್ನಿ ಪಡೆದು ಟ್ರಾನ್ಸ್ ಪ್ಲಾಂಟ್ ಮಾಡಲಾಗುತ್ತಿದೆ ಎಂದರು .

ಬೆಂಗಳೂರು ,ಮೈಸೂರು, ಗುಲ್ಬರ್ಗ ,ಮಂಗಳೂರು ಸೇರಿದಂತೆ ಐದು ವಲಯಗಳಲ್ಲಿ ಕಿಡ್ನಿ ದಾನ ಮಾಡುವವರು ಹೆಸರನ್ನು ನೋಂದಣಿ ಮಾಡಬಹುದು ಎಂದು ತಿಳಿಸಿದ ಅವರು,ಒಂದು ವ್ಯಕ್ತಿಗೆ ಕಿಡ್ನಿ ಕಸಿ ಮಾಡಲು ಐದು ವರ್ಷ ಕಾಯಬೇಕಾಗುತ್ತದೆ ಎಂದರು .

ಕಿಡ್ನಿ ಕಸಿ ಮಾಡುವುದರಿಂದ ಸಾಮಾನ್ಯ ವ್ಯಕ್ತಿಯಂತೆ ಜೀವನ ಸಾಗಿಸಬಹುದು. ಎಲ್ಲಾ ಕೆಲಸಗಳನ್ನು ಮಾಡುವ ಶಕ್ತಿ ಇರುತ್ತದೆ. ಜೊತೆಗೆ ಔಷಧಿಗಳನ್ನು ಜೀವನಪರ್ಯಂತ ತೆಗೆದುಕೊಳ್ಳಬೇಕು .ಇಲ್ಲದಿದ್ದಲ್ಲಿ ತೊಂದರೆ ಆಗುತ್ತದೆ ಎಂದರು. ಡಾಕ್ಟರ್ ನರೇಂದ್ರ ಅವರು ಮಾತನಾಡಿ ,ನಾವು 1500 ಕಿಡ್ನಿಯನ್ನು ಕಸಿ ಮಾಡಿದ್ದೇವೆ. ಚುಂಚನಗಿರಿಯಲ್ಲಿ ಕಿಡ್ನಿ ಕಸಿ ಮಾಡಲು ಉತ್ತಮ ಸೌಲಭ್ಯಗಳಿದ್ದು, ಇಲ್ಲಿ ಉತ್ತಮ ಚಿಕಿತ್ಸೆ ಪಡೆಯಬಹುದು. ಕಿಡ್ನಿ ಸಮಸ್ಯೆಗೆ ಆದಿಚುಂಚನಗಿರಿ ಆಸ್ಪತ್ರೆಯಲ್ಲಿ ಪರಿಹಾರವಿದೆ ಎಂದರು.

ಈ ಸಂದರ್ಭದಲ್ಲಿ ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡಾಕ್ಟರ್ ಶಿವಕುಮಾರ್, ಡಾಕ್ಟರ್ ಅನಿಲ್, ಕಿಡ್ನಿ ಕಸಿ ಮಾಡಿಸಿಕೊಂಡ ವ್ಯಕ್ತಿಗಳಾದ ಹೇಮಂತ್ ಕುಮಾರ್ ಸೇರಿದಂತೆ ಇತರರಿದ್ದರು.

## ನಾಳೆ ಇಎಸ್ ಇಂಜಿನಿಯರಿಂಗ್ ಕಾಲೇಜಿನ 15ನೇ ಪದವಿ ಪ್ರಧಾನ ಸಮಾರಂಭ

ಮಂಡ್ಯ: ಸೆಪ್ಟೆಂಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಪಿಇಎಸ್ ಇಂಜಿನಿಯರಿಂಗ್ ಕಾಲೇಜಿನ 15ನೇ ಪದವಿ ಪ್ರಧಾನ ಸಮಾರಂಭವನ್ನು ಕಾಲೇಜಿನಆವರಣದಲ್ಲಿರುವ ಡಾಕ್ಟರ್ ಎಚ್ ಡಿ ಚೌಡಯ್ಯ ಆಡಿಟೋರಿಯಂನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಡಾಕ್ಟರ್ ಹೆಚ್ ಎಂ ನಂಜುಂಡಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ,ಪಿ ಇ ಟಿ ಅಧ್ಯಕ್ಷರಾದ ವಿಜಯ್ ಆನಂದ್ ಅವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಶಿವರಾತ್ರಿ ದೇಶಿ ಕೇಂದ್ರ ಮಹಾಸ್ವಾಮಿಜಿ ಅವರ ದಿವ್ಯ ಸಾನಿಧ್ಯದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪದವಿಯನ್ನು ಪ್ರದಾನ ಮಾಡಲಾಗುವುದು ಎಂದರು. ಪಿಇಎಸ್ ಇಂಜಿನಿಯರಿಂಗ್ ಕಾಲೇಜು ಎನ್ಬಿಎ ,ಆರ್ ಐ ಆರ್ ಎಫ್ ನಲ್ಲಿ ಅತ್ಯುತ್ತಮ ಸ್ಥಾನ ಪಡೆದಿದೆ .ಕಾಲೇಜಿನಲ್ಲಿ 11 ಇನ್ ಇಂಜಿನಿಯರಿಂಗ್ ಕೋರ್ಸುಗಳಿದ್ದು ,ನ್ಯಾಕ್ ನಿಂದ ಎ ಗ್ರೇಡ್ ಪಡೆದಿದೆ ಎಂದರು .

ಪರೀಕ್ಷಾ ನಿಯಂತ್ರಕ ಡಾಕ್ಟರ್ ಕೆ ಜೆ ಮಹೇಂದ್ರಬಾಬು ಮಾತನಾಡಿ, 2023–24 ರಲ್ಲಿ ಸ್ನಾತಕ ಪದವಿ ಪರೀಕ್ಷೆಗೆ 708 ವಿದ್ಯಾರ್ಥಿಗಳು ಪಾಲ್ಗೊಂಡಿದ್ದು 687 ವಿದ್ಯಾರ್ಥಿಗಳು ಕೇರ್ಗಡೆಯಾಗಿದ್ದಾರೆ .ಅದೇ ರೀತಿ ಸ್ನಾತಕೋತ್ತರ ಪದವಿ ಪರೀಕ್ಷೆಗೆ 124 ಮಂದಿ ಪಾಲ್ಗೊಂಡಿದ್ದು 112 ಮಂದಿ ತೇರ್ಗಡೆಯಾಗಿದ್ದಾರೆ. ಅವರಿಗೆ ಅಂದು ನಡೆಯುವ ಕಾರ್ಯಕ್ರಮದಲ್ಲಿ ಟ್ರಸ್ಟಿನ ಕಾರ್ಯದರ್ಶಿ ಎಸ್‌ಎಲ್ ಶಿವಪ್ರಸಾದ್ ಅವರು ಪದವಿ ಪ್ರದಾನ ಮಾಡಲಿದ್ದಾರೆ ಎಂದರು. ಗೋಷ್ಠಿಯಲ್ಲಿ ಕಾಲೇಜಿನ ಉಪಪ್ರಯಾಂಶುಪಾಲ ಡಾಕ್ಟರ್ ಎಸ್ ವಿನಯ್ ,ಡೀನ್ ಡಾಕ್ಟರ್ ಬಿ ದಿನೇಶ್ ಪ್ರಭು ,ಡಾಕ್ಟರ್ ಗಿರೀಶ್ ಬಾಬು ,ಡಾಕ್ಟರ್ ದಿವಾಕರ್ ಉಪಸ್ಥಿತರಿದ್ದರು.



# ನಾಳೆ ಜಾನಪದ ಕಲಾ ತಂಡಗಳೊಂದಿಗೆ ಗಣಪತಿ ವಿಸರ್ಜನೆ



ಕೆ.ಆರ್.ಪೇಟೆ: ಪಟ್ಟಣದ ಕೆ.ಎಸ್. ಆರ್.ಟಿ.ಸಿ ಬಸ್ ನಿಲ್ದಾಣದ ಮುಂಭಾಗ ಶ್ರೀ ಧರ್ಮಧ್ವಜ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ಪ್ರತಿಷ್ಠಾಪನೆ ಮಾಡಿರುವ ಹಿಂದೂ ಮಹಾ ಗಣಪತಿ ವಿಸರ್ಜನಾ ಮಹೋತ್ಸವ ದಿನಾಂಕ 28–9–2024 ಶನಿವಾರ ವಿಶೇಷ ವಿವಿಧ ಜಾನಪದ ಕಲಾತಂಡಗಳೊಂದಿಗೆ ಶ್ರದ್ಧಾ–ಭಕ್ತಿ, ಸಡಗರ ಸಂಭ್ರಮದಿಂದ ಅರ್ಥಪೂರ್ಣವಾಗಿ ವಿಸರ್ಜನೆ ನಡೆಯಲಿದೆ ಎಂದು ಟ್ರಸ್ಟ್ ಸದಸ್ಯ ಹಾಗೂ ಪುರಸಭಾ ಸದಸ್ಯ ನಟರಾಜ್ ತಿಳಿಸಿದರು.

ಪಟ್ಟಣದ ಜಯನಗರ ಬಡಾವಣೆಯಲ್ಲಿರುವ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್ ರವರ ಕಚೇರಿಯಲ್ಲಿ ಮಾತನಾಡಿದ ಪುರಸಭಾ ಸದಸ್ಯ ನಟರಾಜ್ 11ನೇ ವರ್ಷದ ಹಿಂದೂ ಮಹಾಗಣಪತಿ ಮೂರ್ತಿ ವಿಸರ್ಜನಾ ಮಹೋತ್ಸವದ ಮೆರವಣಿಗೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿಯೆ ಮೊದಲ ಬಾರಿಗೆ ಕೇರಳದ ತಿರುವಂತಪುರಂನ ಪಿ.ಝೆಡ್.ಎಂ ಕಲಾ ಸಮಿತಿ ಇವರಿಂದ ತಾಂಬೊಲಮ್ ಹಾಗೂ ವೈಲೆನ್ ವಾದ್ಯ, ನವಕೇರಳ ಆರ್ಟ್ಸ್ ರವರಿಂದ ಮೋಹಿನಿ ಆಟಂ ದೇವರ ಆಕರ್ಷಣೆ ವೇಷಗಳಾದ ಶ್ರೀ ರಾಮ,ರಾಧೆ ಕೃಷ್ಣ, ಛತ್ರಪತಿ ಶಿವಾಜಿ ಮಹಾರಾಜ್, ವಾಯುಪುತ್ರ ಆಂಜನೇಯ ಮತ್ತು ಇತರೆ ಜಾನಪದ ಕಲಾ ತಂಡಗಳೊಂದಿಗೆ ಜರುಗಲಿದೆ. ಕರ್ನಾಟಕದಲ್ಲೇ ಪ್ರಪ್ರಥಮ ಬಾರಿಗೆ ಇಡ್ರಾಲೀಕ್ ಡಿ.ಜೆ ಮಂಗಳವಾದ್ಯ ಮತ್ತು ಇತರೆ ಸಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ಹಿಂದೂ ಮಹಾಗಣಪತಿ ಉತ್ಸವ ಪಟ್ಟಣದ ರಾಜಬೀದಿಗಳಲ್ಲಿ ವಿಜೃಂಭಣೆಯಿಂದ ಮೆರವಣಿಗೆ ಮೂಲಕ ದೇವಿರಮ್ಮಣ್ಣಿ ಕೆರೆಗೆ ಶ್ರೀ ಯುವಕರು ಮೂರ್ತಿ ವಿಸರ್ಜಿಸಲಾಗುವುದು ಆದ್ದರಿಂದ ಕೆ ಆರ್ ಪೇಟೆ ತಾಲ್ಲೂಕಿನ ಸಮಸ್ತ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ವಿಸರ್ಜನಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಬಳಿಕ ಮಾತನಾಡಿದ ಸಮಾಜ ಸೇವಕ ಆರ್ ಟಿ ಓ ಮಲ್ಲಿಕಾರ್ಜುನ್ ಅವರ ಅಭಿಮಾನಿಗಳ ಬಳಗದ ಅಧ್ಯಕ್ಷ ಗಂಜೀಗೆರೆ ಮಹೇಶ್ ಇತ್ತೀಚಿನ ದಿನಗಳಲ್ಲಿ ಹಬ್ಬ ಹರಿದಿನ ಹೆಸರಿನಲ್ಲಿ ಮೋಜು ಮಸ್ತಿ ಮಾಡುವ ಯುವಕರ ನಡುವೆ ಶ್ರೀ ಧರ್ಮಧ್ವಜ ಸೇವಾ ಸಮಿತಿ ಯುವಕರು ಅಯೋಧ್ಯೆ ಬಾಲರಾಮನ ಮೂರ್ತಿಯ ಮಾದರಿಯಲ್ಲಿ ಶ್ರೀ ಮಹಾ ಗಣಪತಿ ಮೂರ್ತಿಯನ್ನು ಪ್ರತಿಷ್ಠಾಪಿಸಿ ವಿಸರ್ಜನಾ ಕಾರ್ಯಕ್ರಮಕ್ಕೆ ವಿವಿಧ ಅಪರೂಪದ ಕಲಾತಂಡಗಳೊಂದಿಗೆ ವಿಸರ್ಜನೆ ಕೈಗೊಂಡಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಟ್ರಸ್ಟ್ ನ ಪ್ರಧಾನ ಕಾರ್ಯದರ್ಶಿ ಭಾಸ್ಕರ್, ಖಜಾಂಚಿ ನಂದನ್, ಮಹೇಂದ್ರ, ಡಿ.ಸಿ ಕುಮಾರ್,ನಂಜುಂಡ, ರಕ್ಷಿತ್, ಸೇರಿದಂತೆ ಉಪಸ್ಥಿತರಿದ್ದರು.



ಮಂಡ್ಯ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಗರಸಭೆ ಮಂಡ್ಯ ವತಿಯಿಂದ ಪೌರಕಾರ್ಮಿಕರ ದಿನಾಚರಣೆ ಹಾಗೂ ಶ್ರಮಜೀವಿ ಪೌರಕಾರ್ಮಿಕರಿಗೆ ಸನ್ಮಾನ ಸಮಾರಂಭ ಜರುಗಿತು. ಕಾರ್ಯಕ್ರಮವನ್ನು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕರಾದ ರವಿಕುಮಾರ್ ಗಣಿಗ ರವರು ದೀಪ ಬೆಳಗುವ ಮೂಲಕ ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಸಭೆ ಅಧ್ಯಕ್ಷರಾದ ಪ್ರಕಾಶ್ ಎಂ.ವಿ ರವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ್, ಮಂಡ್ಯ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವಿರ್ ಆಸೀಫ್, ನಗರಸಭೆ ಉಪಾಧ್ಯಕ್ಷರಾದ ಅರುಣ್ ಕುಮಾರ್, ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಾದ ತುಷಾರ ಮಣಿ, ನಗರಸಭೆ ಪೌರಾಯುಕ್ತರಾದ ಕೃಷ್ಣಕುಮಾರ್, ಮಾಜಿ ಅಧ್ಯಕ್ಷರಾದ ಮಂಜು ಹೇಚ್.ಎಸ್, ನಗರಸಭೆ ಸದಸ್ಯರುಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು....

## ನಾಗಮಂಗಲದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರ ಆರಂಭ.



ನಾಗಮಂಗಲ.: .ಪಟ್ಟಣದ ತಾಲೂಕು ಆಡಳಿತ ಮಿನಿ ವಿಧಾನಸೌಧದ ಆವರಣದಲ್ಲಿ ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ತಾಲೂಕಿನ ಗ್ರಾಮ ಆಡಳಿತ ಅಧಿಕಾರಿಗಳು ಕೈಗೆ ಕಪ್ಪು ಪಟ್ಟಿ ಕಟ್ಟಿಕೊಂಡು ಅನಿರ್ದಿಸ್ಟಾವಧಿ ಮುಷ್ಕರ ಆರಂಭಿಸಿದರು.

ಅವರು ಸರ್ಕಾರ ಅಭಿವೃದ್ಧಿಪಡಿಸಿರುವ ತಂತ್ರಾಂಶಗಳಾದ ಮೊಬೈಲ್ ಆಫ್ ಬಳಕೆ, ವೆಬ್ ಪೇಜ್ ಸಮಸ್ಯೆ ಸೇರಿದಂತೆ, ರಜಾ ದಿನಗಳಲ್ಲಿಯೂ ಕನಿಷ್ಠ ಮೂಲಭೂತ ಸೌಲಭ್ಯಗಳಿಲ್ಲದೆ ಸದಾ ಮಾನಸಿಕ ಒತ್ತಡಗಳ ನಡುವೆ ಕೆಲಸ ಮಾಡುತ್ತಿರುವ ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ರಾಜ್ಯ ಸರ್ಕಾರವು ಮಾನವೀಯ ನೆಲಗಟ್ಟಿನ ಆಧಾರದ ಮೇರೆಗೆ ಬಗೆಹರಿಸಿ ಅನುಕೂಲ ಮಾಡಿ ಕೊಡಬೇಕು ಎಂದು ತಾಲೂಕು ಸಂಘದ ಪ್ರಧಾನ ಕಾರ್ಯದರ್ಶಿಗಳಾದ ಬಸವರಾಜ. ಕೊಂಟೋಜಿ ರವರುಅಗ್ರಹಿಸಿದರು.

ಸೇವಾ ಜೇಷ್ಠತೆ ಆಧಾರದ ಮೇಲೆ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸೇವಾ ಮುಂಬಡ್ತಿ ನೀಡುವುದು, ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಕೊಡುವುದು ಸೇರಿದಂತೆ ರಾಜ್ಯದಾದ್ಯಂತ ಕರ್ತವ್ಯ ನಿರ್ವಹಿಸುತ್ತಿರುವ 5000ಕ್ಕೂ ಹೆಚ್ಚು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳನ್ನು ಈಡೇರಿಸಬೇಕೆಂದು ಈ ಸಂದರ್ಭದಲ್ಲಿ ಆಗ್ರಹಿಸಿದರು.

ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಯನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗಧಿಪಡಿಸಿ ಆದೇಶ ನೀಡಬೇಕು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ಗ್ರಾಮಮಟ್ಟದಲ್ಲಿ ಕರ್ತವ್ಯ ನಿರ್ವಹಿಸುವಾಗ ಜೀವಾನಿ ಆದರೆ ಆ ಕುಟುಂಬಗಳಿಗೆ 25 ಲಕ್ಷ ಪರಿಹಾರ ಮಂಜೂರು ಮಾಡುವ ವ್ಯವಸ್ಥೆ ಕಲ್ಪಿಸಬೇಕು ಹೀಗೆ ನಮ್ಮ ಅನೇಕ ಸಮಸ್ಯೆಗಳನ್ನು ರಾಜ್ಯ ಸಂಘವು ನಿರ್ಣಯದಂತೆ ಅನಿರ್ಧಿಷ್ಟ ಮುಷ್ಕರವನ್ನು ಬೇಡಿಕೆಗಳು ಈಡೇರುವವರೆಗೆ 26 ರಿಂದ ಎಲ್ಲಾ ಬಗೆಯ ಮೊಬೈಲ್ ಆಪ್ ಮತ್ತು ವೆಬ್ ಅಪ್ಲಿಕೇಶನ್ ಅನ್ನು ಸ್ಥಗಿತಗೊಳಿಸುವ ಮೂಲಕ

ಅನಿರ್ದಿಷ್ಟ ಅವಧಿಯ ಮುಷ್ಕರವನ್ನು ರಾಜ್ಯ ವ್ಯಾಪಿ ಹಮ್ಮಿಕೊಂಡಿರುತ್ತೇವೆ ಇಂದು ತಿಳಿಸಿದರುಗ್ರಾಮ ಆಡಳಿತ ಅಧಿಕಾರಿಗಳ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ತಾಲೂಕಿನ ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ತಾಲೂಕು ಸಂಘದ ಪದಾಧಿಕಾರಿಗಳು ಹಾಜರಿದ್ದರು.

# ಜಿಲ್ಲೆಯಲ್ಲಿ ಹಸಿರು ಪಟಾಕಿಯನ್ನು ಹೊರತು ಪಡಿಸಿ ಬೇರೆ ಪಟಾಕಿ ಮಾರಾಟ ಮಾಡುವಂತಿಲ್ಲ: ಡಾ ಕುಮಾರ

ದೀಪಾವಳಿ ಹಬ್ಬದ ಪ್ರಯುಕ್ತ ಜಿಲ್ಲೆಯ ಪಟಾಕಿ ಮಾರಾಟಗಾರರಿಗೆ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟ ಮಾಡಲು ಅವಕಾಶವಿದ್ದು, ಅಂತಹ ಮಾರಾಟಗಾರರಿಗೆ ಮಾತ್ರ ತಾತ್ಕಾಲಿಕ ಪಟಾಕಿ ಪರವಾನಗಿಯನ್ನು ನೀಡಲಾಗುವುದು. ಹಸಿರು ಪಟಾಕಿಯನ್ನು ಹೊರತು ಪಡಿಸಿ ಬೇರೆ ಪಟಾಕಿಗಳನ್ನು ಮಾರಾಟ ಮಾಡಿದರೆ ನಿಯಮಾನುಸಾರ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ 2024 ನೇ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ತಾತ್ಕಾಲಿಕ ಪಟಾಕಿ ಪರವಾನಗಿ ನೀಡುವ ಹಾಗೂ ಮುಂಜಾಗ್ರತಾ ಕ್ರಮದ ಬಗ್ಗೆ ಸಭೆ ನಡೆಸಿ ಮಾತನಾಡಿದರು.

ಅಕ್ಟೋಬರ್ 29 ರಿಂದ ನವೆಂಬರ್ 02 ರವರೆಗೆ ಹಸಿರು ಪಟಾಕಿ ಮಾರಾಟಗಾರರಿಗೆ ಪರವಾನಿಗೆ ನೀಡಲಾಗುವುದು. ಶಾಲೆ, ಆಸ್ಪತ್ರೆ ಹಾಗೂ ಜನ ಸಂದಣಿ ಇರುವ ಪ್ರದೇಶಗಳಲ್ಲಿ ಕಡ್ಡಾಯವಾಗಿ ಪಟಾಕಿ ಮಾರಾಟ ನಿಷೇಧಿಸಲಾಗುವುದು ಎಂದರು.

ಸಾರ್ವಜನಿಕರಿಗೆ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿ ಹೊಡೆಯಲು ಮಾತ್ರ ಸುಪ್ರೀಂ ಕೋರ್ಟ್ ಆದೇಶದಂತೆ ಅವಕಾಶವಿದೆ. ಈ ಆದೇಶವನ್ನು ಜಿಲ್ಲೆಯ ಪ್ರತಿಯೊಬ್ಬರೂ ಪಾಲಿಸಬೇಕು ಎಂದು ತಿಳಿಸಿದರು.

ಪಟಾಕಿ ಪರವಾನಿಗೆ ಪಡೆಯುವವರು ವಿಶಾಲ ಮೈದಾನದಲ್ಲಿ ಪಟಾಕಿಯನ್ನು ಮಾರಾಟ ಮಾಡಬೇಕು. ಪರವಾನಿಗೆ ( ಲೈಸೆನ್ಸ್ ) ನೀಡಲಾದ ಪ್ರದೇಶವನ್ನು ಹೊರತು ಪಡಿಸಿ ಬೇರೆ ಸ್ಥಳದಲ್ಲಿ ಪಟಾಕಿಯನ್ನು ಮಾರಾಟ ಮಾಡುವಂತಿಲ್ಲ. ಒಂದು ಅಂಗಡಿ ಮಳಿಗೆಯಿಂದ ಮತ್ತೊಂದು ಅಂಗಡಿ ಮಳಿಗೆಗೆ 6 ಮೀಟರ್ ಅಂತರ ಇರಬೇಕು. ಪ್ರತಿ ಮಳಿಗೆಗಳಲ್ಲು ಎಂಟ್ರಿ ಹಾಗೂ ಎಕ್ಸಿಟ್ ಇರಬೇಕು. ಒಂದು ವೇಳೆ ಬೆಂಕಿ ಅವಗಢ ಸಂಭವಿಸಿದರೆ ಬೆಂಕಿಯನ್ನು ನಂದಿಸಲು ಡ್ರಮ್ ಗಳಲ್ಲಿ ನೀರು ತುಂಬಿಸಿರಬೇಕು. ಪಟಾಕಿ ಅಂಗಡಿಗಳಲ್ಲಿ ರಾತ್ರಿ ಸಮಯದಲ್ಲಿ ಯಾರು ಮಲಗುವಂತಿಲ್ಲ. ಅಂಗಡಿಯಲ್ಲಿ ಧೂಮಪಾನ ಮಾಡುವುದರಿಂದ ಅದರ ಕಿಡಿಯಿಂದ ಸ್ಫೋಟಗೊಳ್ಳುವ ಸಾಧ್ಯತೆ ಇದ್ದು, ಧೂಮಪಾನ ಮಾಡುವಂತಿಲ್ಲ. ಈ ನಿಯಮವಳಿಗಳನ್ನು ಅನುಸರಿಸಬೇಕು ಎಂದರು.

ಪ್ರತಿ ಪಟಾಕಿ ಅಂಗಡಿ ಮುಂದೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಹಸಿರು ಪಟಾಕಿಯನ್ನೇ ಬಳಸಬೇಕು ಹಾಗೂ ರಾತ್ರಿ 10 ಗಂಟೆಯ ನಂತರ ಪಟಾಕಿ ಹೊಡೆಯುವಂತಿಲ್ಲ ಎಂದು ಮಾರ್ಗಸೂಚಿಯ ನಾಮಫಲಕವನ್ನು ಅಳವಡಿಸಬೇಕು ಎಂದರು.

ಈಗಾಗಲೇ ಪರಾವನಗಿ ನೀಡಲು ತಾಲ್ಲೂಕು ಮಟ್ಟದಲ್ಲಿ ಸಮಿತಿಯನ್ನು ರಚಿಸಲಾಗಿದ್ದು, ಜಿಲ್ಲೆಯ ಪ್ರತಿ ತಾಲ್ಲೂಕಿಗೆ ತಹಶೀಲ್ದಾರರುಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರರುಗಳು ಪಟಾಕಿ ಮಾರಾಟಗಾರರು ಅಂಗಡಿಯನ್ನು ತೆರೆಯುವ ಸ್ಥಳಗಳನ್ನು ಕಡ್ಡಾಯವಾಗಿ ಪರಿಶೀಲನೆ ನಡೆಸಬೇಕು ಎಂದರು.

ಸಾರ್ವಜನಿಕರಲ್ಲಿ ಆದಷ್ಟು ಪಟಾಕಿ ಕಡಿಮೆಗೊಳಿಸಿ, ದೀಪಗಳನ್ನು ಹಚ್ಚುವ ಮೂಲಕ ದೀಪಾವಳಿ ಹಬ್ಬವನ್ನು ಸಂಭ್ರಮಿಸಿ ಎಂದು ಮನವಿ ಮಾಡಿದರು.

ನಗರಸಭೆಯ ಪೌರ ಕಾರ್ಮಿಕರುಗಳು ಮನೆ ಮನೆಗೆ ಕಸಸಂಗ್ರಹ ಮಾಡಲು ಹೋದಾಗ ಸಾರ್ವಜನಿಕರಲ್ಲಿ ಪಟಾಕಿಗಳನ್ನು ಕಡಿಮೆಗೊಳಿಸಿ ದೀಪವನ್ನು ಹಚ್ಚಿ ಎಂದು ಜಾಗೃತಿ ಮೂಡಿಸಿ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಮಾತನಾಡಿ ಪಟಾಕಿ ಮಾರಾಟಗಾರರು ಪಟಾಕಿ ಗೋಡೌನ್ ಇಡಲು ಯಾವುದೇ ಅವಕಾಶವಿಲ್ಲ. ಪಟಾಕಿ ಮಾರಾಟಗಾರರು ಕಡಿಮೆ ಬೆಲೆಗೆ ಸಿಗುವಂತಹ ಪಟಾಕಿ, ಸಿಡಿಮದ್ದುಗಳನ್ನು ಖರೀದಿ ಮಾಡುತ್ತಾರೆ. ಕೇವಲ ಹಸಿರು ಪಟಾಕಿಗಳನ್ನು ಮಾತ್ರ ಮಾರಾಟಮಾಡಬೇಕು. ಹಸಿರು ಪಟಾಕಿಗೆ ಸಂಬಂಧಿಸಿದಂತೆ ಪಟಾಕಿ ಬಾಕ್ಸ್ ಮೇಲೆ ಇರುವ ಕ್ಯೂ ಆರ್ ಕೋಡ್ ಅನ್ನು ಮೊಬೈಲ್ ನಲ್ಲಿ ಸ್ಕ್ಯಾನ್ ಮಾಡಿದಾಗ ಹಸಿರು ಪಟಾಕಿ ಎಂದು ತಿಳಿಯಬಹುದಾಗಿದೆ. ಪಟಾಕಿ ಮಾರಾಟ ಮಾಡಲು ಬೆಳಿಗ್ಗೆ 6 ರಿಂದ ಸಂಜೆ 6 ರವರೆಗೆ ಅವಕಾಶ. ಸಂಜೆ 6 ಗಂಟೆಯ ನಂತರ ಪಟಾಕಿ ಅಂಗಡಿ ತೆರೆದಿದ್ದರೆ ಅಲ್ಲಿಗೆ ಪೊಲೀಸ್ ತಂಡವು ಭೇಟಿ ನೀಡಿ ಅಂಗಡಿ ಮುಚ್ಚಿಸಲಾಗುತ್ತದೆ. ಅಂತವರ ಪರವಾನಿಗೆ



ರದ್ದಾಗುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಡಾ ಹೆಚ್ ಎಲ್ ನಾಗರಾಜು ಅವರು ಮಾತನಾಡಿ ಕೆಲವರು ರಾತ್ರಿ 10 ಗಂಟೆಯ ನಂತರ ಪಟಾಕಿ ಹೊಡೆಯುವುದು ಕಂಡುಬರುತ್ತದೆ. ಇದು ಶಬ್ದ ಮಾಲಿನ್ಯಕ್ಕೆ ಕಾರಣವಾಗುವುದಲ್ಲದೇ ಅನಾರೋಗ್ಯ ವ್ಯಕ್ತಿಗಳಿಗೆ ತೊಂದರೆ ಉಂಟಾಗುತ್ತದೆ. ರಾತ್ರಿ 10 ಗಂಟೆಯ ನಂತರ ಪಟಾಕಿ ಸಿಡಿಸುವವರಿಗೆ ಪೊಲೀಸ್ ತಂಡವು ನಿರ್ದಿಷ್ಟ ದಂಡ ವಿಧಿಸಿ ಶಿಕ್ಷೆ ವಿಧಿಸಬೇಕು. ಆಗ ಮಾತ್ರ ಇಂತಹ ಘಟನೆಗಳ ಬಗ್ಗೆ ಸಾರ್ವಜನಿಕರು ಎಚ್ಚೆತ್ತುಕೊಳ್ಳುತ್ತಾರೆ. ಜೊತೆಗೆ ಪಟಾಕಿ ಪರವಾನಿಗೆ ತೆಗೆದುಕೊಂಡಿರುವ ಪಟಾಕಿ ಮಾರಾಟಗಾರರ ಮನೆಯನ್ನು ಪರಿಶೀಲನೆ ನಡೆಸಬೇಕು. ಮಾರಾಟಗಾರರು ಯಾವುದೇ ಕಾರಣಕ್ಕೂ ಮನೆಯಲ್ಲಿ ಪಟಾಕಿಗಳನ್ನು ಇಟ್ಟುಕೊಳ್ಳುವಂತಿಲ್ಲ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವಿರ್ ಅಸಿಫ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರಾಘವೇಂದ್ರ, ಮಂಡ್ಯ ತಹಶೀಲ್ದಾರ್ ಡಾ ಶಿವಕುಮಾರ್ ಬಿರಾದಾರ, ಮದ್ದೂರು ತಹಶೀಲ್ದಾರ್ ಸ್ಮಿತಾ ರಾಮ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

Printed by M.Ambika , Published by M.Ambika Owned by M.Ambika, Printed at Kaveri Offset #688, Dasegowda Road, Swarnasandra, Mandya 571402.
Published at #304, Indira Colony, Kabbanahalli Village, Soonagahalli Post, Kothathi Hobli, Mandya Dist - 571403 Karnataka State. Editor - M.Ambika. Mob : 8971226099 email : prajaprajne@gmail.com